ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 28 RNI Number : KNKAN/25/A2770 01-02-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :28 ರಾಯಚೂರು 01-02-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

ಮಹಾ ಡಿಸಿಎಂ ಆಗಿ ಅಜಿತ್ ಪವಾರ್ ಪತ್ನಿ ಸುನೇತ್ರಾ ಪ್ರಮಾಣ ಸ್ವೀಕಾರ

ಮುಂಬೈ (ಮಹಾರಾಷ್ಟ್ರ),ಜ.31- ಎನ್‌ಸಿಪಿ ಬಣಗಳು ವಿಲೀನವಾಗಲಿವೆ ಎಂಬ ಸುದ್ದಿಯ ನಡುವೆಯೇ ಮಾಜಿ ಡಿಸಿಎಂ ದಿವಂಗತ ಅಜಿತ್ ಪವಾರ್ ಅವರ ಪತ್ನಿ ಸುನೇತ್ರಾ ಪವಾರ್ ಅವರು ಉಪಮುಖ್ಯಮಂತ್ರಿಯಾಗಿ ಇಂದು (ಜನವರಿ 31) ಪ್ರಮಾಣವಚನ ಸ್ವೀಕರಿಸಿದರು. ಜತೆಗೆ, ರಾಜ್ಯದ ಇತಿಹಾಸದಲ್ಲಿಯೇ ಮೊದಲ ಮಹಿಳಾ ಡಿಸಿಎಂ ಎಂಬ ಹೆಗ್ಗಳಿಕೆಗೂ ಪಾತ್ರವಾದರು.

ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ, ಎನ್‌ಸಿಪಿ ನಾಯಕರು ಮತ್ತು ಅವರ ಕುಟುಂಬ ಸದಸ್ಯರ ಸಮ್ಮುಖದಲ್ಲಿ ರಾಜ್ಯಪಾಲ ಆಚಾರ್ಯ



ದೇವವ್ರತ್ ಅವರು ಸುನೇತ್ರಾ ಅವರಿಗೆ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು.

ಸಮಾರಂಭದ ಆರಂಭದಲ್ಲಿ, 'ಅಜಿತ್ ಪವಾರ್ ಅಮರ್ ರಹೇ' ಎಂಬ ಘೋಷಣೆಗಳು ಮೊಳಗಿದವು. ರಾಜ್ಯದಲ್ಲಿ ಹಲವು ಪ್ರಗತಿಪರ ಮಹಿಳೆಯರಿದ್ದರೂ, ಹಿಂದೆಂದೂ ಸಿಎಂ ಅಥವಾ ಉಪಮುಖ್ಯಮಂತ್ರಿಯಾಗಿ ಆಯ್ಕೆಯಾಗಿಲ್ಲ.

ಪ್ರಧಾನಿ ಮೋದಿ ಅಭಿನಂದನೆ: ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಸುನೇತ್ರಾ ಪವಾರ್ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದರು. ಮಹಾರಾಷ್ಟ್ರದ ಉಪಮುಖ್ಯಮಂತ್ರಿಯಾಗಿ ತಮ್ಮ ಅಧಿಕಾರಾವಧಿಯನ್ನು ಪ್ರಾರಂಭಿಸುತ್ತಿರುವ ಸುನೇತ್ರಾ ಪವಾರ್ ಅವರಿಗೆ ಅಭಿನಂದನೆಗಳು. ಈ ಜವಾಬ್ದಾರಿ ಹೊತ್ತ ರಾಜ್ಯದ ಮೊದಲ ಮಹಿಳೆಯಾಗಿದ್ದಾರೆ. ರಾಜ್ಯದ ಜನರ ಪರವಾಗಿ ಅವಿಶ್ರಾಂತವಾಗಿ ಕೆಲಸ, ದಿವಂಗತ ಅಜಿತ್ ದಾದಾ ಪವಾರ್ ಅವರ ಕನಸನ್ನು ಈಡೇರಿಸುತ್ತಾರೆ ಎಂಬ ವಿಶ್ವಾಸ ನನಗಿದೆ ಎಂದು ತಿಳಿಸಿದರು.

ಎನ್‌ಸಿಪಿ ನಾಯಕಿಯಾಗಿ ಆಯ್ಕೆ: ಇದಕ್ಕೂ ಮೊದಲು ನಡೆದ ಕೋರ್ ಕಮಿಟಿ ಸಭೆಯಲ್ಲಿ ಸುನೇತ್ರಾ ಅವರನ್ನು ಶಾಸಕಾಂಗ ಪಕ್ಷದ ನಾಯಕಿಯಾಗಿ ಆಯ್ಕೆ ಮಾಡುವ ಮೂಲಕ ರಾಷ್ಟ್ರೀಯತಾವಾದಿ ಕಾಂಗ್ರೆಸ್ ಪಕ್ಷ (ಎನ್‌ಸಿಪಿ) ಅವರನ್ನು ಉಪಮುಖ್ಯಮಂತ್ರಿಯಾಗಲು ದಾರಿ ಮಾಡಿಕೊಟ್ಟಿತು.

ಪ್ರಮಾಣ ಸ್ವೀಕಾರ ಸಮಾರಂಭದಲ್ಲಿ ರಾಜ್ಯಪಾಲ ಆಚಾರ್ಯ ದೇವವ್ರತ್, ಸಿಎಂ ದೇವೇಂದ್ರ ಫಡ್ನವೀಸ್, ಡಿಸಿಎಂ ಏಕನಾಥ್ ಶಿಂಧೆ ಇದ್ದರು.

ಪ್ರಮಾಣ ಸ್ವೀಕಾರ ಸಮಾರಂಭದಲ್ಲಿ ರಾಜ್ಯಪಾಲ ಆಚಾರ್ಯ ದೇವವ್ರತ್, ಸಿಎಂ ದೇವೇಂದ್ರ ಫಡ್ನವೀಸ್, ಡಿಸಿಎಂ ಏಕನಾಥ್ ಶಿಂಧೆ ಇದ್ದರು.

ಸುನೇತ್ರಾ ಕುರಿತು ಮಾಹಿತಿ: ರಾಜ್ಯಸಭಾ ಸದಸ್ಯೆಯಾಗಿರುವ ಸುನೇತ್ರಾ ಅವರು ರಾಜಕೀಯ ಕುಟುಂಬದಿಂದ ಬಂದವರು. ಅವರ ಸಹೋದರ ಪದ್ಮಸಿಂಹ ಪಾಟೀಲ್ ಮಹಾರಾಷ್ಟ್ರದ ಹಿರಿಯ ನಾಯಕಿ, ಶಾಸಕಿ ಹಾಗೂ ಸಚಿವೆಯಾಗಿ ಸೇವೆ ಸಲ್ಲಿಸಿದ್ದಾರೆ.

1963ರ ಅಕ್ಟೋಬರ್ 18 ರಂದು ಧರಾಶಿವ್ ಜಿಲ್ಲೆಯಲ್ಲಿ (ಹಿಂದಿನ ಉಸ್ಮಾನಾಬಾದ್) ಜನಿಸಿದ ಸುನೇತ್ರಾ, ಔರಂಗಾಬಾದ್ ವಿವಿಯಲ್ಲಿ ವಾಣಿಜ್ಯ ವಿಷಯದಲ್ಲಿ ಪದವಿ ಪಡೆದರು. 1985 ರಲ್ಲಿ, ಅವರು ಅಜಿತ್ ಅವರನ್ನು ವಿವಾಹವಾದರು. ಅವರ ತವರು ಬಾರಾಮತಿಯಲ್ಲಿ ವಿವಿಧ ಸಾಮಾಜಿಕ ಮತ್ತು ರಾಜಕೀಯ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದರು.

2023 ರಲ್ಲಿ ವಿಭಜನೆಯ ನಂತರ, ಅವರು 2024 ರ ಲೋಕಸಭಾ ಚುನಾವಣೆಯಲ್ಲಿ ಬಾರಾಮತಿ ಲೋಕಸಭಾ ಕ್ಷೇತ್ರದಿಂದ ಸಂಸತ್ತಿಗೆ ಸ್ಪರ್ಧಿಸಿದರು. ಆದರೆ, ಶರದ್ ಪವಾರ್ ಅವರ ಪುತ್ರಿ ಸುಪ್ರಿಯಾ ಸುಳೆ ಅವರ ವಿರುದ್ಧ ಸೋಲನುಭವಿಸಿದರು.

2025 ರಲ್ಲಿ ಸುನೇತ್ರಾ ಅವರು ರಾಜ್ಯಸಭೆ ಗೆ ಆಯ್ಕೆಯಾದರು. ಅವರ ವೆಬ್‌ಸೈಟ್‌ನಲ್ಲಿರುವ ವಿವರಗಳ ಪ್ರಕಾರ, ಶರದ್ ಪವಾರ್ ಸ್ಥಾಪಿಸಿದ ಶಿಕ್ಷಣ ಸಂಸ್ಥೆಯಾದ ವಿದ್ಯಾ ಪ್ರತಿಷ್ಠಾನದ ಮಂಡಳಿಯಲ್ಲಿ ಟ್ರಸ್ಟಿಯಾಗಿದ್ದಾರೆ. ಅವರು 2017 ರಿಂದ ಸಾವಿತ್ರಿಬಾಯಿ ಫುಲೆ ಪುಣೆ ವಿಶ್ವವಿದ್ಯಾಲಯದ ಸೆನೆಟ್ ಸದಸ್ಯರಾಗಿದ್ದಾರೆ.

2010 ರಲ್ಲಿ ಸುನೇತ್ರಾ ಪರಿಸರ ಜಾಗೃತಿ ಮೂಡಿಸಲು ಮತ್ತು ಪರಿಸರ ಪ್ರಜ್ಞೆಯ ಸಮುದಾಯಗಳನ್ನು ಬೆಳೆಸಲು ಮೀಸಲಾಗಿರುವ ಸರ್ಕಾರೇತರ ಸಂಸ್ಥೆಯಾದ ಎನ್ವಿರಾನ್ಮೆಂಟಲ್ ಫೋರಮ್ ಆಫ್ ಇಂಡಿಯಾ () ಸ್ಥಾಪಿಸಿದರು.

ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಹೆಲ್ಮೆಟ್ ವಿತರಣೆ

ವಿದ್ಯಾರ್ಥಿಗಳು ಸಂಚಾರ ನಿಯಮಗಳನ್ನು ಪಾಲಿಸಬೇಕು: ಜಿಲ್ಲಾಧಿಕಾರಿ ನಿತೀಶ್ ಕೆ ಸಲಹೆ

ರಾಯಚೂರು,ಜ.31

ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ ರಾಯಚೂರು, ಎನ್‌ಹೆಚ್‌ಎಐ ಪ್ರಾದೇಶಿಕ ಕಚೇರಿ ಬೆಂಗಳೂರು ಹಾಗೂ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರಿಯ ರಸ್ತೆ ಸುರಕ್ಷತಾ ಮಾಸ-2026ರ ಅಂಗವಾಗಿ ರಸ್ತೆ ಅಪಘಾತಗಳನ್ನು ತಡೆಗಟ್ಟುವ ಮತ್ತು ರಸ್ತೆ ಸುರಕ್ಷತೆಯ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ವಿನೂತನ ಜಾಗೃತಿ ಅಭಿಯಾನ ನಡೆಯಿತು.

ಈ ಕಾರ್ಯಕ್ರಮದ ಭಾಗವಾಗಿ ಜನವರಿ 31ರಂದು ಶನಿವಾರ ದಂದು



ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ರಾಯಚೂರಿನ ವಿವಿಧ ಕಾಲೇಜಿನ ವಿದ್ಯಾರ್ಥಿಗಳಿಗೆ ಉಚಿತವಾಗಿ ಹೆಲ್ಮೆಟ್‌ಗಳನ್ನು ವಿತರಿಸಲಾಯಿತು.

ಈ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಕಾರ್ಯಕ್ರಮದಲ್ಲಿ ಐಎಸ್‌ಐ ಗುರುತಿನ ಹೆಲ್ಮೆಟ್‌ಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಿ ಮಾತನಾಡಿ, ವಿದ್ಯಾರ್ಥಿಗಳು ಸಂಚಾರ ನಿಯಮಗಳನ್ನು ಪಾಲಿಸಬೇಕು ಮತ್ತು ಹೆಲ್ಮೆಟ್ ಧರಿಸುವ ಮಹತ್ವ ಅರಿಯಬೇಕು. ನ್ಯಾಷನಲ್ ಹೈವೇ ಕಡೆಯಿಂದ ನಮ್ಮ ಜಿಲ್ಲೆಯ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಹೆಲ್ಮೆಟ್ ಉಚಿತವಾಗಿ ನೀಡಲಾಗುತ್ತಿದ್ದು, ಅದನ್ನು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕೆಂದರು.

ಹೆಲ್ಮೆಟ್ ಧರಿಸದೇ ತಲೆಗೆ ಪೆಟ್ಟು ಬಿದ್ದು ಜೀವ ಕಳೆದುಕೊಂಡ ಹೆಚ್ಚಿನ ಪ್ರಕರಣಗಳು ನಮ್ಮ ಜಿಲ್ಲೆಯಲ್ಲಿ ದಾಖಲಾಗಿವೆ. ಜೀವ ರಕ್ಷಣೆ ಮತ್ತು ಕುಟುಂಬದ ಭದ್ರತೆಗೆ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಸಂಚಾರ ನಿಯಮಗಳನ್ನು ಪಾಲನೆ ಮಾಡಬೇಕು. ನಗರದಲ್ಲಿ ಹೆದ್ದಾರಿ ಹೋಗಿದ್ದರಿಂದ ಲಾರಿ, ಟಿಪ್ಪರ್ ದೊಡ್ಡ ಪ್ರಮಾಣದ ಭಾರಿ ವಾಹನಗಳ ಸಂಚಾರದಿದ ಜೊತೆಗೆ ಸಂಚಾರ ನಿಯಮಗಳನ್ನು ಸರಿಯಾಗಿ

3ನೇ ಪುಟಕ್ಕೆ

ರಾಯಚೂರು ಉತ್ಸವದ ಜ್ಯೋತಿ ರಥಯಾತ್ರೆಗೆ ಇಂದು ಚಾಲನೆ

ರಾಯಚೂರು,ಜ.31-

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ಜ್ಯೋತಿ ರಥಯಾತ್ರೆಗೆ ಫೆ.1ರಂದು ಬೆಳಗ್ಗೆ 10 ಗಂಟೆಗೆ ನಗರದ ಐತಿಹಾಸಿಕ ಕರ್ನಾಟಕ ಸಂಘದ ಆವರಣದಿಂದ ಚಾಲನೆ ಸಿಗಲಿದೆ.

ಮೇಲಧಿಕಾರಿಗಳಿಂದ ಸೂಚನೆ: ಜಿಲ್ಲೆಯ ಪ್ರತಿಯೊಂದು ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯವಾಗಿ ಜ್ಯೋತಿ ರಥಯಾತ್ರೆಯಲ್ಲಿ ಭಾಗಿಯಾಗಲು ಆಯಾ ಕಚೇರಿಯ ಮೇಲಧಿಕಾರಿಗಳು ಕಚೇರಿ ಆದೇಶ ಹೊರಡಿಸಿ ತಮ್ಮ ತಮ್ಮ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದ್ದರಿಂದಾಗಿ ಬೇರೆ ಬೇರೆ ಇಲಾಖೆಗಳ ಕಚೇರಿಗಳಲ್ಲಿ ಕಚೇರಿ ಆದೇಶ ಜಾರಿ ಮಾಡಿ ಕ್ರಮವಹಿಸಲಾಗಿದೆ.

ಆಯುಕ್ತರಿಂದ ಕಚೇರಿ ಆದೇಶ: ಮಹಾನಗರ ಪಾಲಿಕೆಯ ಕರವಸೂಲಿಗಾರರು, ಎಸ್‌ಎಚ್‌ಜಿ ಕರವಸೂಲಿಗಾರರು, ತಮ್ಮ ಪ್ಯಾಕೇಜನಿಂದ ತಲಾ 20 ಜನ ಪೌರ ಕಾರ್ಮಿಕರನ್ನು ಕರೆ ತರಲು ಮತ್ತು ಎಲ್ಲ ಸಮುದಾಯ ಸಂಘಟಕರನ್ನು ಕರೆ ತರಬೇಕು ಎಂದು ಮಹಾನಗರ ಪಾಲಿಕೆಯ ಆಯುಕ್ತರು ಕಚೇರಿ ಆದೇಶದ ಮೂಲಕ ಪಾಲಿಕೆಯ ಕಂದಾಯ ಅಧಿಕಾರಿಗಳು, ಕಚೇರಿ ವ್ಯವಸ್ಥಾಪಕರು, ಹಿರಿಯ ಕಿರಿಯ ಆರೋಗ್ಯ ನಿರೀಕ್ಷಕರಿಗೆ ಸೂಚನೆ ನೀಡಿದ್ದಾರೆ.

ಹಾಜರಾತಿ ಸಲ್ಲಿಸಲು ಸೂಚನೆ: ಜಿಲ್ಲೆಯ ಎಲ್ಲಾ ಮುಖ್ಯ ಅಧಿಕಾರಿಗಳು ಹಾಗೂ ಜಿಲ್ಲೆಯ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು ತಮ್ಮ ಕಾರ್ಯಾಲಯದ ಸಿಬ್ಬಂದಿಯೊದಿಗೆ ತಪ್ಪದೆ ಬೆಳಿಗ್ಗೆ 10 ಗಂಟೆಗೆ ಹಾಜರಿರಬೇಕು ಹಾಗೂ ಕಾರ್ಯಕ್ರಮದ ನಂತರ ಹಾಜರಾತಿಯನ್ನು ಕಡ್ಡಾಯವಾಗಿ ಕಾರ್ಯಾಲಯಕ್ಕೆ ಸಲ್ಲಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.



ಜಪ್ತಿ ಮಾಡಿದ ಮರಳನ್ನು ಕಾಮಗಾರಿಗಳಿಗೆ ಉಪಯೋಗಿಸಲು ಅವಕಾಶ

ರಾಯಚೂರು ಜ.31

ಜಿಲ್ಲಾ ಮತ್ತು ತಾಲ್ಲೂಕು ಮರಳು ಸಮಿತಿ ಸದಸ್ಯರಿಂದ ರಾಯಚೂರು ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು ಗಣಿಗಾರಿಕೆ, ಸಾಗಾಣಿಕೆ, ದಾಸ್ತಾನು ಕುರಿತಂತೆ ಪ್ರಕರಣಗಳನ್ನು ದಾಖಲು ಮಾಡಿದ್ದು, ಈ ಪ್ರಕರಣಗಳಲ್ಲಿ ಮರಳನ್ನು ಇಲಾಖೆಯ ವಶಕ್ಕೆ ಪಡೆಯಲಾಗಿದೆ.

ಈ ಜಪ್ತು ಮರಳನ್ನು ಸರ್ಕಾರಿ ಕಾಮಗಾರಿಗಳಿಗೆ ಉಪಯೋಗಿಸಲು ಜಿಲ್ಲಾ ಮರಳು ಸಮಿತಿಯಿಂದ ಪ್ರತಿ ಮೆಟ್ರಿಕ್ ಟನ್‌ಗೆ 541 ರೂ.ಗಳಂತೆ ದರ ನಿಗದಿಪಡಿಸಿದ್ದು, ಈ ಜಪ್ತು ಮರಳನ್ನು ಲೋಕೋಪಯೋಗಿ ಇಲಾಖೆ, ಭೂಸೇನೆ, ಸಣ್ಣ ನೀರಾವರಿ, ಪಿಆರ್‌ಇಡಿ, ವಿಮಾನ ನಿಲ್ದಾಣ, ರಾಷ್ಟ್ರಿಯ ಹೆದ್ದಾರಿ, ರಾಜ್ಯ ಹೆದ್ದಾರಿ, ರೈಲ್ವೆ, ಕೆ.ಕೆ.ಆರ್.ಡಿ.ಬಿ, ಪ್ರಮುಖ ನೀರಾವರಿ ಇಲಾಖೆಗಳು ಹಾಗೂ ಇತರೆ ಸರ್ಕಾರಿ ಇಲಾಖೆಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾಮಗಾರಿಗಳಿಗೆ ಸದುಪಯೋಗಪಡಿಸಿಕೊಳ್ಳಲು ಜಿಲ್ಲಾ ಮರಳು ಸಮಿತಿ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಸರ್ಕಾರಿ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾಮಗಾರಿಗಳಿಗೆ ಸದುಪಯೋಗಪಡಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಸಂಪರ್ಕಿಸಬಹುದಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಹಿರಿಯ ಭೂ ವಿಜ್ಞಾನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಮಾಹಿತಿ ಕೊಡದ ಅಧಿಕಾರಿಗಳಿಗೆ ದಂಡವಿಧಿಸಿ ಬಿಸಿ ಮುಟ್ಟಿಸಿದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್

ರಾಯಚೂರು ಜನವರಿ 31 (ಕರ್ನಾಟಕ ವಾರ್ತೆ): ಮಾಹಿತಿ ನೀಡಲು ನಿರ್ಲಕ್ಷ್ಯ ಮಾಡಿದ್ದಕ್ಕೆ ಮೂರು ಜನ ಸಾರ್ವಜನಿಕ ಮಾಹಿತಿ ಅಧಿಕಾರಿಗಳಾದ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಕರ್ನಾಟಕ ಮಾಹಿತಿ ಆಯೋಗ ಕಲಬುರಗಿ ಪೀಠದಿಂದ ದಂಡ ವಿಧಿಸಿ ಆದೇಶ ಮಾಡಲಾಗಿದೆ ಎಂದು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ್ ಸಿಂಗ್ ಅವರು ಹೇಳಿದರು.

ಕಲಬುರಗಿಯ ತಮ್ಮ ಪೀಠದ ಕಚೇರಿಯಲ್ಲಿ ಜನವರಿ 31ರಂದು ಸುದ್ದಿಗಾರರೊಂದಿಗೆ ಅವರು



ಮಾತನಾಡಿ, ಗುರುಮೂರ್ತಿ ಎನ್ನುವರು 17.11.2022 ರಂದು ಮಾಹಿತಿ ಕೋರಿ ಸಲ್ಲಿಸಿದ 6(1) ಅರ್ಜಿಗೆ ಮಾಹಿತಿ ನೀಡದ ಕಾರಣ ಮಾನ್ವಿ ತಾಲೂಕಿನ ಸುಂಕೇಶ್ವರ ಗ್ರಾಮ ಪಂಚಾಯತ ಅಧಿಕಾರಿ ನಾಗಭೂಷಣ ಅವರಿಗೆ 25,000 ರೂ. ದಂಡ ವಿಧಿಸಿ 23.01.2026 ರಂದು ಆದೇಶ ಮಾಡಲಾಗಿದೆ ಎಂದು ತಿಳಿಸಿದರು.

ಈ ಪ್ರಕರಣದ ವಿಚಾರಣೆ ನಡೆಸಿದ ಆಯೋಗವು, 15ನೇ ಹಣಕಾಸು ಆಯೋಗದ ಕುರಿತು ಕೋರಿದ ಮಾಹಿತಿ ನೀಡಬೇಕು ಎಂದು 06.10.2025 ರಂದು ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಎಚ್ಚರಿಕೆ ಆದೇಶ ನೀಡಲಾಗಿತ್ತು. ಆದರೂ ಅವರು ಮಾಹಿತಿ ನೀಡಲು ನಿರ್ಲಕ್ಷ ತೋರಿದ್ದರಿಂದಾಗಿ 25,000 ರೂ. ಸಾವಿರ ದಂಡ ವಿಧಿಸಲಾಗಿದೆ ಎಂದರು.

ಜಲಾಲ ಎನ್ನುವರು ಸಹ 15ನೇ ಹಣಕಾಸು ಆಯೋಗದ ಅನುದಾನ ಕುರಿತು ಸುಂಕೇಶ್ವರ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ನಾಗಭೂಷಣ ಅವರಿಗೆ 25.10.2023 ರಂದು 6(1) ರಡಿ ಅರ್ಜಿ ಸಲ್ಲಿಸಿದ್ದರು. ಈ ಪ್ರಕರಣದಲ್ಲಿ ಮಾಹಿತಿ ಸಿಗದ ಅರ್ಜಿದಾರರು 19(3) ಆಯೋಗಕ್ಕೆ ಸಲ್ಲಿಸಿದ ಅರ್ಜಿಯ ವಿಚಾರಣೆಯನ್ನು ದಿನಾಂಕ 25.10.2023 ರಂದು ನಡೆಸಿ, ಅರ್ಜಿದಾರರಿಗೆ ಮಾಹಿತಿ ನೀಡಬೇಕು ಎಂದು ಕರ್ನಾಟಕ ಮಾಹಿತಿ ಕಾಯ್ದೆ 2005ರ 20(1) ರನ್ವಯ ಎಚ್ಚರಿಕೆ ನೋಟಿಸ್ ನೀಡಲಾಗಿತ್ತು. ಆದಾಗ್ಯೂ ಪಿ.ಡಿ.ಓ. ನಾಗಭೂಷಣ ಅವರು ಮಾಹಿತಿ ನೀಡದ ಕಾರಣ ಈ ಪ್ರಕರಣದ ಬಗ್ಗೆ ದಿನಾಂಕ: 23.01.2026 ರಂದು ವಿಚಾರಣೆ ನಡೆಸಿದಾಗ ಅವರು ವಿಚಾರಣೆ ಗೈರು ಆಗಿ ಮಾಹಿತಿ ನೀಡದ ಕಾರಣ

3ನೇ ಪುಟಕ್ಕೆ

ಬಾಲ್ಯ ವಿವಾಹ ನಿಷೇಧ ಕಾಯ್ದೆ ಜಾಗೃತಿ ಸಂಚಾರಿ ರಥಕ್ಕೆ ಚಾಲನೆ

ಮಕ್ಕಳು ಭವಿಷ್ಯ ರೂಪಿಸಿಕೊಳ್ಳುವತ್ತ ಗಮನ ಹರಿಸಲಿ: ನ್ಯಾ.ಹೆಚ್.ಎ.ಸಾತ್ವಿಕ್ ಸಲಹೆ

ರಾಯಚೂರು,ಜ.31-

ಬಾಲ್ಯ ವಿವಾಹ ನಿಷೇಧ ಜಾಗೃತಿ ಸಂಚಾರಿ ರಥ ವಾಹನಕ್ಕೆ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ. ಸಾತ್ವಿಕ್ ಅವರು ಜನವರಿ 31ರಂದು ನಗರದ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಆವರಣದಲ್ಲಿ ಹಸಿರು ನಿಶಾನೆ ತೋರಿದರು.



ಈ ವೇಳೆ ಅವರು ಮಾತನಾಡಿ, ಬಾಲ್ಯ ವಿವಾಹವು ಅತ್ಯಂತ ಕೆಟ್ಟ ಪಿಡುಗಾಗಿದ್ದು, ಇದು ಮಕ್ಕಳ ಭವಿಷ್ಯವನ್ನು ಹಾಳು ಮಾಡುತ್ತದೆ. ಹಾಗೂ ಹಲವಾರು ಸಾಮಾಜಿಕ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಅಪ್ರಾಪ್ತ ವಯಸ್ಸಿನ ಮಕ್ಕಳನ್ನು ಮದುವೆ ಮಾಡಿಕೊಳ್ಳುವವರಿಗೆ, ಮಾಡುವವರಿಗೆ, ಬೆಂಬಲ ನೀಡುವವರಿಗೆ ಬಾಲ್ಯ ವಿವಾಹ ನಿಷೇಧ ಕಾಯ್ದೆ-2006 ರಂತೆ ಎರಡು ವರ್ಷಗಳ ಜೈಲು ಶಿಕ್ಷೆ ಹಾಗೂ ದಂಡ ವಿಧಿಸಲಾಗುತ್ತದೆ. ಹುಡುಗಿಗೆ ಹದಿನೆಂಟು ವರ್ಷ ಹಾಗೂ ಹುಡುಗನಿಗೆ ಇಪ್ಪತ್ತೊಂದು ವರ್ಷ ತುಂಬುವವರೆಗೆ ಯಾವುದೇ ಕಾರಣಕ್ಕೂ ವಿವಾಹ ಮಾಡಿಕೊಳ್ಳಬಾರದು. ಮತ್ತು ಉತ್ತಮವಾಗಿ ವಿದ್ಯಾಭ್ಯಾಸ ಮಾಡುವ ಮೂಲಕ ನಿಮ್ಮ ಭವಿಷ್ಯ ರೂಪಿಸಿಕೊಳ್ಳುವ ಕಡೆಗೆ ಗಮನ ಹರಿಸಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಈ ವೇಳೆ ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮರೇಶ್ ಹಾವಿನ ಅವರು ಮಾತನಾಡಿ, ಮಕ್ಕಳು ವಿದ್ಯಾರ್ಥಿ ದಿಸೆಯಲ್ಲಿ ಶಿಕ್ಷಣದ ಕಡೆಗೆ ಒತ್ತು ನೀಡಿ ಚೆನ್ನಾಗಿ ಅಭ್ಯಾಸ ಮಾಡಿ ತಂದೆ ತಾಯಿಯ ಗೌರವ ಮತ್ತು ಕೀರ್ತಿಯನ್ನು ಹೆಚ್ಚಿಸಬೇಕು ಎಂದರು.

ಸಂಚಾರಿ ರಥ ವಾಹನದ ಮೂಲಕ ಜಾಗೃತಿ: ನಂತರ, ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಆವರಣದಿಂದ ನಗರದ ಸ್ಟೇಷನ್ ವೃತ್ತದವರೆಗೆ ಬಾಲ್ಯ ವಿವಾಹ ಜಾಗೃತಿ ಕುರಿತು ಸಂಚಾರಿ ರಥ ವಾಹನದ ಮೂಲಕ ಮಕ್ಕಳೊಂದಿಗೆ ಜಾಥಾ ನಡೆಯಿತು. ಇದಕ್ಕೂ ಮುಂಚೆ ಮಕ್ಕಳಿಗೆ ಬಾಲ್ಯ ವಿವಾಹ ನಿಷೇಧ ಕುರಿತು ಪ್ರತಿಜ್ಞೆ ವಿಧಿ ಬೋಧಿಸಲಾಯಿತು.

ಇದೇ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ನವೀನ್ ಕುಮಾರ್, ಜಿಲ್ಲಾ ಕಾರ್ಮಿಕ ಅಧಿಕಾರಿ ಆರತಿ, ಕ್ಷೇತ್ರ

3ನೇ ಪುಟಕ್ಕೆ

ಮಾತಾ ನಾಗರ ಯಲ್ಲಮ್ಮ ದೇವಿ ಜಾತ್ರಾ ಮಹೋತ್ಸವಕ್ಕೆ ಚಾಲನೆ

ಫೆ.6ರವರೆಗೆ ಧಾರ್ಮಿಕ ಸಾಂಸ್ಕೃತಿಕ ಕಾರ್ಯಕ್ರಮ

ರಾಯಚೂರು,ಜ.31-

ಸುಕ್ಷೇತ್ರ ದೇವಸೂಗೂರು ಗ್ರಾಮದಲ್ಲಿರುವ ಶ್ರೀ ಮಾತಾ ನಾಗರ ಯಲ್ಲಮ್ಮ ದೇವಿ ದೇವಸ್ಥಾನದ ಜಾತ್ರಾ ಮಹೋತ್ಸವವನ್ನು ಜನವರಿ 28ರಿಂದ ಫೆಬ್ರವರಿ 6ರವರೆಗೆ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ ಎಂದು ದೇವಸ್ಥಾನ ಸೇವಾ ಸಮಿತಿ ಟ್ರಸ್ಟ್ ಅಧ್ಯಕ್ಷ ಬಸವರಾಜಸ್ವಾಮಿ ಮರಳ ಅವರು ಹೇಳಿದರು.

ನಗರದ ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತ್ರಾ ಮಹೋತ್ಸವದ ಅಂಗವಾಗಿ ಪಂಚಾಮೃತಾಭಿಷೇಕ, ಮಹಾಪೂಜೆ, ಉಚ್ಚಾಯ ಮಹೋತ್ಸವ, ಲಕ್ಷ ದೀಪೋತ್ಸವ, ರಥೋ



ತ್ಸವ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಪ್ರಮುಖ ಕಾರ್ಯಕ್ರಮಗಳು ಜನವರಿ 28ರಿಂದ ಪ್ರತಿದಿನ ಬೆಳಿಗ್ಗೆ 8 ಗಂಟೆಗೆ ಪಂಚಾಮೃತಾಭಿಷೇಕ ಹಾಗೂ ಮಹಾಪೂಜೆ ಜರುಗಲಿದೆ. ಜನವರಿ 31ರಂದು ಸಂಜೆ 5.30ಕ್ಕೆ ಮಹಿಳೆಯರಿಂದ ಉಚ್ಚಾಯ ಮಹೋತ್ಸವ ನಡೆಯಲಿದೆ.

ಫೆಬ್ರವರಿ 1ರಂದು ಸಂಜೆ 5 ಗಂಟೆಗೆ ಲಕ್ಷ ದೀಪೋತ್ಸವ, ಸಂಜೆ 6 ಗಂಟೆಗೆ ರಥೋತ್ಸವ ಜರುಗಲಿದ್ದು, ಪ್ರತಿ ವರ್ಷದ ಸಂಪ್ರದಾಯದಂತೆ ಈ ಬಾರಿ ಕೂಡ ರಥವನ್ನು ಮಹಿಳೆಯರೇ ಎಳೆಯಲಿದ್ದಾರೆ.

ವಿಶೇಷ ಆಕರ್ಷಣೆ ಜಾತ್ರಾ ಮಹೋತ್ಸವದ ಅಂಗವಾಗಿ ಫೆಬ್ರವರಿ 2ರಂದು ಕೈಕಲ್ಲು ಹಾಗೂ ಉಸುಕಿನ ಚೀಲ ಎತ್ತುವ ಶಕ್ತಿ ಪ್ರದರ್ಶನ ಸ್ಪರ್ಧೆ ಆಯೋಜಿಸಲಾಗಿದೆ. ಅತ್ಯಧಿಕ ಭಾರ ಎತ್ತುವ ಐದು ಸ್ಪರ್ಧಾಳುಗಳಿಗೆ ಬೆಳ್ಳಿ ಕಡಗ ಬಹುಮಾನವಾಗಿ ನೀಡಲಾಗುವುದು.

ಭಕ್ತಿ ಪ್ರಧಾನ ನಾಟಕ ಫೆಬ್ರವರಿ 1ರಂದು ರಾತ್ರಿ 10.30ಕ್ಕೆ ಶ್ರೀ ಸೂಗೂರೇಶ್ವರ ಸಾಂಸ್ಕೃತಿಕ ನಾಟ್ಯ ಕಲಾ ಬಳಗ (ರಿ.), ದೇವಸೂಗೂರು ಇವರಿಂದ ''ಉಧೋ.. ಉಧೋ..

3ನೇ ಪುಟಕ್ಕೆ



ಭಾರತಕ್ಕೆ ಹುತಾತ್ಮರ ಕೊಡುಗೆ ಸ್ಮರಣೀಯ- ಪ್ರೊ. ಬಿ.ಎಸ್.ಬಿರಾದಾರ

ಬೀದರ, ಜ.31-

ಬ್ರಿಟೀಷರಿಂದ ಭಾರತದೇಶ ಸ್ವತಂತ್ರ್ಯವಾಗಲು ಅನೇಕ ಮಹಾನೀಯರ ತ್ಯಾಗ, ಹೋರಾಟ, ದೇಶ ಭಕ್ತ ಹುತಾತ್ಮರ ಕೊಡುಗೆ ಶ್ಲಾಘನೀಯವಾಗಿದೆ ಎಂದು ಬೀದರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಬಿಎಸ್.ಬಿರಾದಾರ ರವರು ನುಡಿದರು. ಅವರು ಶುಕ್ರವಾರ ಬೀದರ ವಿಶ್ವವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಂಡಿದ್ದ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ನಮ್ಮ ದೇಶಕ್ಕೆ ಸ್ವಾತಂತ್ರ್ಯ ಗಳಿಸಿಕೊಡುವಲ್ಲಿ ಭಾರತವನ್ನು ಉಳಿಸುವಲ್ಲಿ ಅನೇಕ ದೇಶಭಕ್ತರು ಪ್ರಾಣತ್ಯಾಗ ಮಾಡಿ ಹುತಾತ್ಮರಾಗಿದ್ದಾರೆ. ರಾಷ್ಟ್ರಪಿತ ಮಹಾತ್ಮ ಗಾಂಧೀಜಿವರು ತಮ್ಮ ಅಹಿಂಸಾ ತತ್ವದಿಂದಲೇ ಬ್ರಿಟಿಷರನ್ನು ಸೋಲಿಸಿದರು. ಅವರು ಶಾಂತಿ ಸಹನೆ ಅಹಿಂಸೆ, ಮತ್ತು ಸತ್ಯಾಗ್ರಹದ ಮೂಲಕ ಈ ಭವ್ಯಭಾರತಕ್ಕೆ ಸ್ವಾತಂತ್ರ ಕೊಡಿಸುವಲ್ಲಿ ಶ್ರಮಿಸಿ ಕೊನೆಗೆ ಹುತಾತ್ಮರಾದರು. ಸೂರ್ಯ ಚಂದ್ರರು ಇರುವರೆಗೆ ಅಮರ ದೇಶ ಭಕ್ತರು ಚಿರಸ್ಥಾಯಿ ಆಗಿರುತ್ತಾರೆ ಎಂದರು. ಇದೇ ಸಂದರ್ಭದಲ್ಲಿ ಎಲ್ಲಾ ಗಣ್ಯರು ಹುತಾತ್ಮರಿಗಾಗಿ ಎರಡು ನಿಮಿಷ ಮೌನಾಚರಣೆ ಮೂಲಕ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಬೀದರ ವಿಶ್ವವಿದ್ಯಾಲಯ ಕುಲಸಚಿವರಾದ ಪ್ರೊ. ಪರಮೇಶ್ವರ ನಾಯ್ಕ ಟಿ.. ಶಿಕ್ಷಕ/ಶಿಕ್ಷಕೇತರ ಸಿಬ್ಬಂಧಿಗಳು ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಡಾ. ರಾಮಚಂದ್ರ ಗಣಾಪುರ ರವರು ನಿರೂಪಿಸಿದರು.

ನಾಯಿ ಕಡಿತ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಿ-ಡಿಹೆಚ್ಓ

ಬಳ್ಳಾರಿ,ಜ.30-

ಸಮುದಾಯಗಳಲ್ಲಿ ಹೆಚ್ಚಾಗಿ ನಾಯಿ ಕಡಿತ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳ ಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ವಿಸಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ನಾಯಿ ಕಡಿತ ಪ್ರಕರಣಗಳು ಕಡಿಮೆಗೊಳಿಸುವ ನಿಟ್ಟಿನಲ್ಲಿ ಹಮ್ಮಿಕೊಳ್ಳಬೇಕಾದ ಜಾಗೃತಿ ಕಾರ್ಯಕ್ರಮಗಳ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಾಯಿ, ಬೆಕ್ಕು, ಇತರೆ ಯಾವುದೇ ಪ್ರಾಣಿಗಳು ಕಚ್ಚಿದಾಗ ರೇಬೀಸ್ ಕಾಯಿಲೆ ಬರುವ ಸಾಧ್ಯತೆಯಿದ್ದು, ಪ್ರಮುಖವಾಗಿ ನಾಯಿಗಳ ಕಡಿತದಿಂದ ಹೆಚ್ಚಿನ ಪ್ರಮಾಣದಲ್ಲಿ ರೋಗ ಹರಡುವುದರಿಂದ ನಿರ್ಲಕ್ಷ್ಯ ಮಾಡದೇ, ಕಚ್ಚಿದ ಅಥವಾ ಪರಚಿದ ಜಾಗವನ್ನು ಸೋಪು,



ನೀರಿನಿಂದ ತೊಳೆದು ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ರೇಬೀಸ್ ಚುಚ್ಚುಮದ್ದು ಪಡೆಯಲು ಸೂಚಿಸ ಬೇಕು ಎಂದು ನಿರ್ದೇಶನ ನೀಡಿ ದರು.

ಸಾರ್ವಜನಿಕರು ಸಹ ಸಾಕಿದ ಅಥವಾ ಯಾವುದೇ ಅಪರಿಚಿತ ನಾಯಿ, ಯಾವುದೇ ಪ್ರಾಣಿ ಕಚ್ಚಿದಲ್ಲಿ ನಿರ್ಲಕ್ಷ್ಯ ಮಾಡದೇ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯರಿಂದ ಅಗತ್ಯ ಚುಚ್ಚುಮದ್ದು ಪಡೆಯ ಬೇಕು. ಇದರಿಂದ ಸಂಭಾವ್ಯ ರೇಬಿಸ್ ಖಾಯಿಲೆಯನ್ನು ತಡೆಯುವುದರ ಜೊತೆಗೆ ವ್ಯಕ್ತಿಯ ಜೀವವನ್ನು ಕಾಪಾ ಡುವ ಕಾರ್ಯಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕಿದೆ ಎಂದರು.

ಆಶಾ ಕಾರ್ಯಕರ್ತೆಯರು ಪ್ರತಿದಿನ ಮನೆ ಭೇಟಿ ನೀಡುವ ಸಮಯದಲ್ಲಿ ಅಥವಾ ಯಾವುದೇ ಸಮೀಕ್ಷೆಯ ಸಂದರ್ಭದಲ್ಲಿ ನಾಯಿ ಕಡಿತ ಪ್ರಕರಣಗಳ ಕುರಿತು ಕುಟುಂಬ ಸದಸ್ಯರಿಂದ ಮಾಹಿತಿ ಪಡೆಯುವು ದರ ಜೊತೆಗೆ ನಾಯಿ ಕಡಿತದ ಕುರಿತು ಮುನ್ನೆಚ್ಚರಿಕೆ ಕ್ರಮವಹಿಸಲು ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ನಾಯಿ ಕಡಿತ ಕುರಿತು ಜಾಗೃತಿ, ಮಾಹಿತಿ ಬಿಂಬಿಸುವ ಫ್ಲೆಕ್ಸ್ ಪ್ರದರ್ಶನ ಮಾಡಬೇಕು ಎಂದು ವೈದ್ಯಾಧಿಕಾರಿಗಳಿಗೆ ಸೂಚಿಸಿದ ಅವರು, ಗ್ರಾಮ ಪಂಚಾಯಿತಿ ಒಳಗೊಂಡು ಇತರೆ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಸ ಸಂಗ್ರಹಿಸುವ ವಾಹನಗಳಲ್ಲಿ ನಾಯಿ ಕಡಿತದ ಕುರಿತು ಜಾಗೃತಿ ಮಾಹಿತಿ ಇರುವ ಆಡಿಯೋ ಜಿಂಗಲ್ ಪ್ರತಿನಿತ್ಯ ಸಾರ್ವಜನಿಕ ಸ್ಥಳಗಳಲ್ಲಿ ಪ್ರಸಾರ ಮಾಡಲು ತಿಳಿಸಬೇಕು. ಪ್ರತಿ ಶನಿವಾರ ನಡೆಯುವ ವಾರದ ಸಭೆಯಲ್ಲಿ ಕ್ಷೇತ್ರ ಸಿಬ್ಬಂದಿಯವರಿಗೆ ನಾಯಿ ಕಡಿತದ ಕುರಿತು ಕ್ಷೇತ್ರ ವರದಿ ಮಾಹಿತಿಯ ಬಗ್ಗೆ ಚರ್ಚಿಸಬೇಕು ಎಂದರು. ಸಾರ್ವಜನಿಕರು ಮನೆಯ ಸುತ್ತ-ಮುತ್ತ ಓಣಿ-ಬೀದಿಗಳಲ್ಲಿ ಉಳಿದ ಆಹಾರ ಪದಾರ್ಥಗಳನ್ನು ಚೆಲ್ಲಬಾರದು. ಇದರಿಂದ ಬೀದಿ ನಾಯಿ ಹಾವಳಿ ಜಾಸ್ತಿಯಾಗುತ್ತದೆ ಹಾಗೂ ಚಿಕ್ಕ ಮಕ್ಕಳು ಮನೆಯ ಹೊರಗಡೆ ಇರುವಾಗ ತಂದೆ-ತಾಯಿ ಗಮನಹರಿಸಬೇಕು. ಮಕ್ಕಳ ಕೈಯಲ್ಲಿ ಆಹಾರ ಪದಾರ್ಥಗಳನ್ನು ಕಸಿದು ಕೊಳ್ಳಲು ಬಂದು ನಾಯಿ ಕಚ್ಚುವ ಅಪಾಯ ಹೆಚ್ಚಾಗಿರುತ್ತದೆ. ಮುಖ್ಯ ವಾಗಿ ನಾಯಿ ಕಚ್ಚಿದ ಸಂದರ್ಭದಲ್ಲಿ ಮನೆ ಮದ್ದು ಅಥವಾ ನಾಟಿ ವೈದ್ಯರ ಹತ್ತಿರ ಹೋಗದೇ ಹತ್ತಿರದ ಆರೋಗ್ಯ ಕೇಂದ್ರಗಳ ಬಳಿ ತೆರಳಿ ಲಸಿಕೆ ಪಡೆಯಲು ತಿಳಿಸಿದರು.

ಶೇ.100 ರಷ್ಟು ತಡೆಗಟ್ಟಬಹುದಾದ ಖಾಯಿಲೆಯಾಗಿರುವ ರೇಬೀಸ್ ತಡೆಗೆ ನಾಯಿ ಕಚ್ಚಿದ ನಂತರ ಗಾಯವನ್ನು ಹರಿಯುವ ಸ್ವಚ್ಚ ನೀರಿನಲ್ಲಿ 15 ನಿಮಿಷಗಳ ಕಾಲ ತೊಳೆಯುವುದರಿಂದ ಶೇ.50 ರಿಂದ 70 ರಷ್ಟು ರೇಬಿಸ್‌ಗೆ ತುತ್ತಾಗುವುದನ್ನು ತಡೆಯಬಹುದಾಗಿದೆ. ವೈದ್ಯರ ಸಲಹೆ ಮೇರೆಗೆ 1ನೇ ದಿವಸ, 3ನೇ ದಿವಸ, 7ನೇ ದಿವಸ, 14ನೇ ದಿವಸ ಮತ್ತು 28ನೇ ದಿವಸ ಸಂಪೂ ರ್ಣವಾಗಿ ಎಲ್ಲಾ 5 ಡೋಸ್‌ಗಳನ್ನು ಪಡೆಯುವುದರ ಮೂಲಕ ರೇಬಿಸ್ ತಡೆಗಟ್ಟಬಹುದು ಎಂದರು. ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಎ.ಆರ್.ವಿ ಲಸಿಕೆ ಲಭ್ಯತೆ ಇಟ್ಟುಕೊಳ್ಳಬೇಕು. ಪ್ರಸ್ತುತ ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ತಕ್ಷಣಕ್ಕೆ ಲಸಿಕೆ ಲಭ್ಯವಾಗುವ ನಿಟ್ಟಿನಲ್ಲಿ ಆ್ಯಂಟಿ ರೇಬಿಸ್ ಲಸಿಕೆ ಲಭ್ಯವಿದ್ದು, ಆರೋಗ್ಯ ಸಿಬ್ಬಂದಿ ರೋಗಿಯ ಚಿಕಿತ್ಸೆಗೆ ಆದ್ಯತೆ ನೀಡಬೇಕು. ಬಳಿಕ ಅಗತ್ಯ ದಾಖಲೆ ಪಡೆಯಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇ ಕ್ಷಣಾದಿಕಾರಿ ಡಾ.ಮರಿಯಂಬಿ ವಿ.ಕೆ., ಪಶುಪಾಲನ ಮತ್ತು ಪಶು ವೈದ್ಯಕೀಯ ಇಲಾಖೆಯ ಉಪ ನಿರ್ದೇಶಕ ಡಾ.ಸದಾಶಿವ ಉಪ್ಪಾರ, ವೈದ್ಯಾಧಿಕಾರಿಗಳಾದ ಡಾ.ಶ್ರೀಧರ್, ಡಾ.ದುರುಗಪ್ಪ, ಡಾ.ಕೊಟ್ರೇಶ್, ಡಾ.ಅನಿಲ್ ಕುಮಾ ರ್, ಡಾ.ಗೋ ಪಾಲ್ ರಾವ್, ಡಾ.ಜೆಷನ್ ವಾಸಿಫ್, ಡಾ.ವಿಶಾಲಾಕ್ಷಿ ಹಾಗೂ ಸರ್ವೇಕ್ಷಣಾಧಿಕಾರಿ ಘಟಕದ ಅಧಿಕಾರಿ-ಸಿಬ್ಬಂದಿ ಹಾಜರಿದ್ದರು.

ಬಳ್ಳಾರಿ: ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಸ್ವಚ್ಛತಾ ಕಾರ್ಯ

ಸ್ವಚ್ಛತೆ, ನೈರ್ಮಲ್ಯ ಕುರಿತು ಅರಿವು ಇರಲಿ

ಬಳ್ಳಾರಿ,ಜ.30-

ನಾಗರಿಕರು ಸ್ವಚ್ಛತೆ, ನೈರ್ಮಲ್ಯ ಹಾಗೂ ತ್ಯಾಜ್ಯ ವಿಲೇವಾರಿ ಕುರಿತು ಅರಿವು ಹೊಂದಬೇಕು ಎಂದು 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಜಿ.ಪ್ರಮೋದ ಅವರು ಹೇಳಿದರು.



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಮತ್ತು ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಸ್ವಚ್ಛತಾ ದಿನಾಚರಣೆ ಅಂಗವಾಗಿ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಹಾತ್ಮ ಗಾಂಧೀಜಿಯವರ ಹುತಾತ್ಮರಾದ ದಿನದ ನೆನಪಿಗಾಗಿ ರಾಷ್ಟ್ರೀಯ ಸ್ವಚ್ಛತಾ ದಿನ ಆಚರಿಸಲಾಗುತ್ತದೆ. ಎಲ್ಲರೂ ಸ್ವಚ್ಛತೆ ಮತ್ತು ನೈರ್ಮಲ್ಯತೆಗೆ ಪ್ರಾಮುಖ್ಯತೆ ನೀಡೋಣ ಎಂದು ಹೇಳಿದರು.

ತ್ಯಾಜ್ಯ ನಿರ್ವಹಣೆ ಕುರಿತು ಅರಿವು ಹೊಂದಬೇಕು. ತ್ಯಾಜ್ಯವನ್ನು ವಿಂಗಡಿಸುವ ಮೂಲಕ ನಗರ ಸ್ಥಳೀಯ-ಸಂಸ್ಥೆಗಳ ವ್ಯಾಪ್ತಿಯ ಕಸ ವಿಲೇವಾರಿ ವಾಹನಗಳಿಗೆ ನೀಡಬೇಕು. ಮಹಾತ್ಮ ಗಾಂಧೀಜಿಯವರ ಸ್ವಚ್ಛ ಭಾರತದ ಕನಸನ್ನು ನನಸಾಗಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಪ್ರಿನ್ಸಿಪಲ್ ಹಿರಿಯ ಸಿವಿಲ್ ನ್ಯಾಯಾಧೀಶರಾದ ಇಬ್ರಾಹಿಂ ಮುಜಾವರ್ ಅವರು ಮಾತನಾಡಿ, ಎಲ್ಲಿ ಶುಚಿತ್ವ ಅಡಗಿರುತ್ತದೆಯೋ; ಅಲ್ಲಿ ದೈಹಿಕ, ಮಾನಸಿಕ ಆರೋಗ್ಯ ಸದೃಢವಾಗಿರುತ್ತದೆ. ಅದೇರೀತಿಯಾಗಿ ಪ್ಲಾಸ್ಟಿಕ್ ಬಳಕೆಯಿಂದ ಪರಿಸರಕ್ಕೆ ಹಾನಿಯಾಗುವ ಸಂಭವವಿದ್ದು, ಪ್ರತಿಯೊಬ್ಬರೂ ಪ್ಲಾಸ್ಟಿಕ್ ಚೀಲ, ಪ್ಲಾಸ್ಟಿಕ್ ಬಾಟಲ್ ಗಳ ಬಳಕೆ ಕಡಿಮೆಗೊಳಿಸಬೇಕು. ಇದರಿಂದ ಮುಂದಿನ ಪೀಳಿಗೆಗೆ ಆರೋಗ್ಯಕರ ಪರಿಸರ ಕೊಡುಗೆ ನೀಡಿದಂತಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್. ಹೊಸಮನೆ ಅವರು ಮಾತನಾಡಿ, ಸ್ವಚ್ಛತೆಯು ಆರೋಗ್ಯಕರ ಜೀವನದ ಅವಿಭಾಜ್ಯ ಅಂಗವಾಗಿದ್ದು, ನಾವೆಲ್ಲರೂ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಮಹಾತ್ಮ ಗಾಂಧೀಜಿಯವರ ಪರಿಕಲ್ಪನೆಯಂತೆ ಸುಂದರ-ಸ್ವಚ್ಛ ಭಾರತ ನಿರ್ಮಿ ಸೋಣ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಯಿತು.

ಈ ವೇಳೆ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರಾಘವೇಂದ್ರ ಗೌಡ.ಬಿ.ಜಿ., 3ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಡಿ.ಪಿ ಕುಮಾರ ಸ್ವಾಮಿ, 4ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ವಾಸುದೇವ ರಾಧಕಾಂತ್ ಗುಡಿ, ಪ್ರಿನ್ಸಿಪಲ್ ಕೌಟುಂಬಿಕ ನ್ಯಾಯಾಧೀಶರಾದ ವೆಂಕಟೇಶ್, ಒಂದನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ನಸ್ರತ್ ಮುಖ್ತಾರ್ ಅಹ್ಮದ್ ಖಾನ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ರಾಜೇಶ್.ಎನ್.ಹೊಸಮನೆ, ಪ್ರಿನ್ಸಿಪಲ್ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀಶರಾದ ನಾಗೇಶ್ ನಾಯ್ಕ, 1ನೇ ಅಪರ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀಶರಾದ ಸಿದ್ದಲಿಂಗಯ್ಯ ಗಂಗಾಧರ ಮಠ, 2ನೇ ಅಪರ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀಶರಾದ ವಿನುತಾ ಬಿ.ಎಸ್., 3ನೇ ಅಪರ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀ ಶರಾದ ಮುದುಕಪ್ಪ ಒಡನ್ ಸೇರಿದಂತೆ ಜಿಲ್ಲಾ ನ್ಯಾಯಾಲ ಯದ ಅಧಿಕಾರಿ-ಸಿಬ್ಬಂದಿ ವರ್ಗ ಭಾಗವಹಿಸಿದ್ದರು.



ಫೆ.10 ರಂದು ಕಾಯಕ ಶರಣರ ಜಯಂತಿ ವಿಜೃಂಭಣೆಯಿಂದ ಆಚರಿಸಲು ನಿರ್ಧಾರ

ಕಲಬುರಗಿ,ಜ.31-

ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶರಣರ ಜಯಂತಿಯನ್ನು ಫೆಬ್ರವರಿ 10 ರಂದು ವಿಜೃಂಭಣೆಯಿಂದ ಆಚರಿಸಲು ಜಿಲ್ಲಾಧಿಕಾರಿ ಕಚೇರಿಯ ಚುನಾವಣೆ ಶಾಖೆಯ ತಹಸಿಲ್ದಾರರಾದ ಪಂಪಯ್ಯ ಅವರ ಸಭೆಯಲ್ಲಿ ನಿರ್ಧರಿಸಲಾಯಿತು.

ಇತ್ತೀಚಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಇದೆ ಫೆಬ್ರವರಿ 10 ರಂದು ಮಧ್ಯಾಹ್ನ 12 ಗಂಟೆಗೆ ಕಲಬುರಗಿ ನಗರದ ಡಾ. ಎಸ್ ಎಂ ಪಂಡಿತ ರಂಗಮಂದಿರದಲ್ಲಿ ಕಾಯಕ ಶರಣರ ಜಯಂತಿ ಕಾರ್ಯಕ್ರಮ ಜರುಗಲಿದ್ದು, ಈ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು.

ಅಂದು ಬೆಳಿಗ್ಗೆ 9 ಗಂಟೆಗೆ ಕಡ್ಡಾಯವಾಗಿ ಎಲ್ಲಾ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸರ್ಕಾರಿ ಕಚೇರಿಗಳಲ್ಲಿ, ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು. ಸಭೆಯಲ್ಲಿ ನುರಿತ ಉಪನ್ಯಾಸಕರನ್ನು ಸಹ ಆಹ್ವಾನಿಸಲು ತೀರ್ಮಾನಿಸಲಾಯಿತು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದರ ಜೊತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಯಂತಿ ಸಮಿತಿ ಅಧ್ಯಕ್ಷರನ್ನಾಗಿ ಹಾಗೂ ನುರಿತ ಉಪನ್ಯಾಸಕರನ್ನು ನೇಮಕ ಮಾಡಲಾಗುವುದು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ಜಗದೀಶ್ವರಿ ನಾಶಿ ಪ್ರೋಟೋಕಾಲ್ ಪ್ರಕಾರ ಕಾರ್ಯಕ್ರಮ ಪತ್ರಿಕಾ ಆಮಂತ್ರಣ ಮುದ್ರಿಸಲಾಗುವುದು. ನಾಡ ಗೀತೆ,ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ರಮೇಶ್ ಹೊಸಮನಿ, ಜಗನ್ನಾಥ್, ಶಿವಕುಮಾರ, ದೇವೇಂದ್ರ, ವಿಜಯಲಕ್ಷ್ಮಿ, ರವಿ .ಎಸ್. ಕೊಡ್ಲಾ, ಗುರುಲಿಂಗ ಕೊಡ್ಲಾ, ಡಾ. ಬಲಭೀಮ್ ಸಾಂಗ್ಲಿ, ಸಿದ್ದಣ್ಣ ಬಾವಿಮನಿ, ನಾಗರಾಜ್ ಎಸ್ ಒಂಟಿ, ಕಾಶಿರಾಯ್ ನಂದರ್ಕರ್, ಸೈಬಣ್ಣ ಎಂ ಹೊಳ್ಕರ, ಶಿವಶರಣಪ್ಪ ದೊಡ್ಡಮನಿ ಉಪಸ್ಥಿತರಿದ್ದರು.

ರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ ಆಚರಣೆ

ಬೀದರ, ಜ.31-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಗೂ ಶಾಲಾ ಶಿಕ್ಷಣ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿ ರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ ಅಂಗವಾಗಿ ಇತ್ತೀಚಿಗೆ ಜಿಲ್ಲಾ ರಂಗಮಂದಿರ ಬೀದರದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಹೆಣ್ಣು ಮಕ್ಕಳ ಹಕ್ಕು ಮತ್ತು ಸಬಲೀಕರಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ಹೆಣ್ಣು ಮಕ್ಕಳು ಸಶಕ್ತರಾಗಲು ಸಮಾಜ ಅವಕಾಶ ಮಾಡಿಕೊಡಬೇಕೆಂದರು. ನಂತರ ಮಕ್ಕಳೊಂದಿಗೆ ಸಂವಾದ ಮಾಡಿದರು.



ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ ಎ.ಬನಸೋಡೆ ಅವರು ಮಕ್ಕಳ ಕಾಯ್ದೆಗಳ ಕುರಿತು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಶ್ರೀಧರ ಎಂ.ಎಸ್. ಮಾತನಾಡಿ, ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮ ಸನ್ಮಾನ್ಯ ಪ್ರಧಾನ ಮಂತ್ರಿಗಳು ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮ ಎಂಬ ಹೊಸ ಯೋಜನೆಯನ್ನು 22 ಜನವರಿ 2015 ರಂದು ರಾಷ್ಟ್ರೀಯ ಮಟ್ಟದಲ್ಲಿ ಜಾರಿಗೆ ತಂದಿರುತ್ತಾರೆ. ಕುಸಿಯುತ್ತಿರುವ ಮಕ್ಕಳ ಲಿಂಗ ಅನುಪಾತವನ್ನು ಉತ್ತಮ ಪಡಿಸುವುದು ಹಾಗೂ ಮಹಿಳೆಯರನ್ನು ಸಬಲೀಕರಣ ಗೊಳಿಸುವುದು, ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಈ ಯೋಜನೆಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಹಾಗೂ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯಗಳ ಸಹಕಾರದಿಂದ ಅನುಷ್ಠಾನಗೊಳಿಸಲಾಗುತ್ತದೆ. ಈ ಕಾರ್ಯಕ್ರಮದ ಅನುಷ್ಠಾನವನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಲಿಂಗ ಪಕ್ಷಪಾತ ಮತ್ತು ಲಿಂಗ ಆಯ್ಕೆ ಮಾಡುವುದನ್ನು ತಡೆಗಟ್ಟುವುದು, ಹೆಣ್ಣು ಮಕ್ಕಳ ಉಳಿವು ಮತ್ತು ಅವರ ರಕ್ಷಣೆಯನ್ನು ಖಾತ್ರಿಗೊಳಿಸುವುದು, ಹೆಣ್ಣು ಮಕ್ಕಳಿಗೆ ಶಿಕ್ಷಣವನ್ನು ಖಾತ್ರಿಗೊಳಿಸುವುದು ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿ ಹಲವಾರು ಅರಿವು ಕಾರ್ಯಕ್ರಮ ಮೂಲಕ ಶಾಲಾ ಹಾಗೂ ಕಾಲೇಜು ಮಕ್ಕಳಿಗೆ ಅರಿವು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ಸಾರ್ವಜನಿಕ ಶಿಕ್ಷಣಾ ಇಲಾಖೆಯಿಂದ ಮಕ್ಕಳಿಗಾಗಿ ಇಲಾಖೆಗಳ ಪರಿಚಯಾತ್ಮಕ ಕುರಿತು ಕಾರ್ಯಕ್ರಮವನ್ನು ಆಯೋಜಿಸಿ ಇಲಾಖೆಗಳ ಕಾರ್ಯವೈಖರಿ ಹಾಗೂ ಇಲಾಖೆಗಳ ಯೋಜನೆಗಳ ಕುರಿತು ಮಾಹಿತಿಯನ್ನು ಮಕ್ಕಳಿಗೆ ಅರಿವು ಮೂಡಿಸಲಾಯಿತ್ತು.

ಕಾರ್ಯಕ್ರಮದಲ್ಲಿ ಬೀದರ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿರುವ ಹೆಣ್ಣು ಮಕ್ಕಳನ್ನು ಸನ್ಮಾನ ಮಾಡಿ ಗೌರವ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಬೀದರ ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶಿಶ್ ರೆಡ್ಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಧ್ಯಾನೇಶ್ವರ ನಿರಗುಡೆ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸುರೇಶ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಯೋಗೇಶ್, ಜಿಲ್ಲಾ ಸಾಂಖಿಕ ಅಧಿಕಾರಿ ಸುವರ್ಣಾ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಸುನಿತಾ, ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ರೂಪಾ ಕೋಟೆಗೌಡರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಶ್ರೀಕಾಂತ ಮೆಂಗಜಿ, ಬೀದರ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಶಿಮಪ್ಪ ಸೇರಿದಂತೆ ಜಿಲ್ಲಾ, ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ಗೌರವ ಧನ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ವಿಕಲಚೇತನರಿಂದ ಅರ್ಜಿ ಆಹ್ವಾನ

ಯಾದಗಿರಿ,ಜ.31-

ಗ್ರಾಮೀಣ ಪುನರ್ವಸತಿ ಯೋಜನೆಯಡಿಯಲ್ಲಿ ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಖಾನಾಪೂರ ಎಸ್.ಹೆಚ್ ಹಾಗೂ ಯಮನೂರು ಗ್ರಾಮ ಪಂಚಾಯತ್ ನಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ಗೌರವ ಧನ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ಆಸಕ್ತಿಯುಳ್ಳ ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಽಕಾರಿ ಶರಣಪ್ಪ ಅವರು ತಿಳಿಸಿದ್ದಾರೆ.

ದಾಖಲಾತಿಗಳು : ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಶಾಲಾ ವರ್ಗಾವಣಾ ಪ್ರಮಾಣ ಪತ್ರ, ವಿಕಲಚೇತನ ಗುರುತಿನ ಪ್ರಮಾಣ ಪತ್ರ, ತಹಸೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, 2 ಫೋಟೋ ಸಲ್ಲಿಸಬೇಕು. ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಖಾನಾಪೂರ ಎಸ್. ಹೆಚ್ ಹಾಗೂ ಯಮನೂರು ಗ್ರಾಮ ಪಂಚಾಯತ್ ಕಾರ್ಯಾಲಯದಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ತಾತ್ಕಾಲಿಕ ಗೌರವ ಧನ ಆಧಾರದ ಮೇಲೆ ಕಾರ್ಯನಿರ್ವಹಿಸಲು ಸ್ಥಳೀಯ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಅರ್ಹ ವಿಕಲಚೇತನರಿಂದ 2026ರ ಫೆಬ್ರವರಿ 6ರ ಸಂಜೆ 5.30 ಗಂಟೆಗೆ ಒಳಗೆ ಅರ್ಜಿಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕೊಠಡಿ ಸಂಖ್ಯೆ ಬಿ11, ಬಿ12 ನೆಲಮಹಡಿ ಜಿಲ್ಲಾಡಳಿತ ಭವನ ಯಾದಗಿರಿ ಇಲ್ಲಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಪವಾಡಗಳ ರಹಸ್ಯ ಬಯಲು : ವೈಜ್ಞಾನಿಕ ಚಿಂತನಾ ಕಾರ್ಯಕ್ರಮ

ಬಾಗಲಕೋಟೆ ,ಜ.30-

ಬಾಗಲಕೋಟೆ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಹಾಗೂ ಸರ್ಕಾರಿ ಬಾದಾಮಿ ತಾಲೂಕಿನ ಕಾಕನೂರ ಹಿರಿಯ ಪ್ರಾಥಮಿಕ ಶಾಲೆ ಸಹ ಯೋಗದಲ್ಲಿ ಪವಾಡಗಳ ರಹಸ್ಯ ಬಯಲು ಎಂಬ ವೈಜ್ಞಾನಿಕ ಚಿಂತನಾ ಕಾರ್ಯಕ್ರಮ ಇತ್ತೀಚೆಗೆ ಜರುಗಿತು.

ಶಾಲಾ ಶಿಕ್ಷಣ ಇಲಾಖೆಯ ವಿಜ್ಞಾನ ವಿಷಯ ಪರಿವೀಕ್ಷಕ ಎಂ. ಎಸ್.ನ್ಯಾಮಗೌಡ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳಿಗೆ ಪವಾಡಗಳ ಹಿಂದಿರುವ ವೈಜ್ಞಾನಿಕ ಸತ್ಯತೆಯನ್ನು ಅರಿತಕೊಂಡು ಜಾಗೃತರಾಗಬೇಕೆಂದರು. ವಿಜ್ಞಾನಕ್ಕೆ ಸಂಬಂಧಿಸಿದ ಪುಸ್ತಕಗಳನ್ನು ಓದುವುದರ ಮೂಲಕ ವೈಜ್ಞಾನಿಕ ಮನೋಭಾವನೆಯನ್ನು ಹೆಚ್ಚಿಸಿಕೊಳ್ಳಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತೋವಿವಿಯ ಕುಲಸಚಿವ ಡಾ.ಜನಾರ್ಧನ್ ಮಾತನಾಡಿ, ವಿದ್ಯಾರ್ಥಿಗಳು ವಿಜ್ಞಾನದ ಮೇಲಿನ ಆಸಕ್ತಿಯನ್ನು ಹೆಚ್ಚಿಸಿಕೊಳ್ಳುವುದರ ಮೂಲಕ ಮೂಢನಂಬಿಕೆಗಳನ್ನು ಹೋಗಲಾಡಿಸಬೇಕೆಕು. ಪ್ರಸ್ತುತ ವಿಜ್ಞಾನ ಮತ್ತು ತಂತ್ರಜ್ಞಾನದ ಬೆಳವಣಿಗೆಗಳ ಬಗ್ಗೆ ಹೆಚ್ಚಿನ ಮಾಹಿತಿಗಳನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಕಾರ್ಯಕ್ರಮದ ಅತಿಥಿಗಳಾಗಿ ಆಗಮಿಸಿದ್ದ ಕಾಕನೂರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಯ ಎಸ್.ಆರ್. ಮೇಟಿ ಮಾತನಾಡಿ ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದ ಸದುಪಯೋಗವನ್ನು ಪಡೆದುಕೊಂಡು ವೈಜ್ಞಾನಿಕ ಚಿಂತನೆಯನ್ನು ಬೆಳೆಸಿಕೊಳ್ಳಬೇಕು. ಕಾರ್ಯಕ್ರಮಕ್ಕಾಗಿ ತಮ್ಮ ಶಾಲೆಯನ್ನು ಆಯ್ದುಕೊಂಡಿದ್ದಕ್ಕೆ ಅಭಿನಂಧನೆ ಸಲ್ಲಿಸಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಹುಬ್ಬಳ್ಳಿ-ಧಾರವಾಡ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಜಿಲ್ಲಾಧ್ಯಕ್ಷ ಡಾ.ಮಂಜುನಾಥ ಬಾರಕೇರ ಮಾತನಾಡಿ ವಿದ್ಯಾರ್ಥಿಗಳಿಗೆ ವಿಜ್ಞಾನ ಮತ್ತು ಮೂಢನಂಬಿಕೆಗಳ ನಡುವಿನ ವ್ಯತ್ಯಾಸವನ್ನು ವಿವರವಾಗಿ ತಿಳಿಸುತ್ತಾ ವೈಜ್ಞಾನಿಕ ಚಿಂತನೆಯನ್ನು ಬಲಪಡಿಸಿ ಕೊಳ್ಳಲು ತಿಳಿಸಿದರು.

ಕಾರ್ಯಕ್ರ ಮದ ಭಾಗವಾಗಿ ವಿವಿಧ ಪ್ರಾತ್ಯಕ್ಷಿ ಕೆಗಳ ಮೂಲಕ ಪವಾಡಗಳ ಹಿಂದಿನ ವೈಜ್ಞಾನಿಕ ಕಾರಣಗಳನ್ನು ವಿದ್ಯಾರ್ಥಿ ಗಳಿಗೆ ತಿಳಿಸಿದರು ಮತ್ತು ವಿದ್ಯಾರ್ಥಿಗಳೊಂದಿಗೆ ಪ್ರಶ್ನೋತ್ತರಗಳ ಸಂವಾದವನ್ನು ಮಾಡುವುದರ ಮೂಲಕ ವಿದ್ಯಾರ್ಥಿಗಳಿಗೆ ವೈಜ್ಞಾನಿಕ ಮನೋಭಾವನೆಯನ್ನು ಹೆಚ್ಚಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಈಶ್ವರ ನವಲಗುಂದ, ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರದ ಗಂಗನಗೌಡ ಪಾಟೀಲ, ಎಸ್.ಹೆಚ್. ಪೋಲೀಸ್, ಶಿಕ್ಷಕಿ ಎಸ್.ಪಿ.ಕಳಸಾ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿ ತರಿದ್ದರು. ಕಾರ್ಯಕ್ರಮವನ್ನು ಶ್ರೀ ಈರಣ್ಣ ಬುಳ್ಳಾ, ಕ್ಯೂರೇಟರ್, ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಬಾಗಲಕೋಟೆ ರವರು ನಿರೂಪಿಸಿ, ವಂದಿಸಿದರು. ಕಾರ್ಯಕ್ರಮದಲ್ಲಿ ಒಟ್ಟು 70 ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಭಾಗವಹಿಸಿದ್ದರು.

ಫೆ.2, 3 ರಂದು ಕಾಗದರಹಿತ ನೋಂದಣಿಗೆ ತರಬೇತಿ ಕಾರ್ಯಗಾರ

ವಿಜಯನಗರ,ಜ.30-

ಜಿಲ್ಲೆಯಾದ್ಯಂತ ಕಾಗದರಹಿತ ನೋಂದಣಿಗೆ ಆಯಾ ಉಪ ನೋಂದಣಿ ಕಛೇರಿಯ ವ್ಯಾಪ್ತಿಯಲ್ಲಿ ಫೆಬ್ರವರಿ 2 ಮತ್ತು 3ರಂದು ತರಬೇತಿ ಹಮ್ಮಿಕೊಳ್ಳಲಾಗಿದೆ. ತರಬೇತಿ ಅಂಗವಾಗಿ ಫೆ. 2 ರಂದು ಬೆಳಗ್ಗೆ 11ಕ್ಕೆ ಕೂಡ್ಲಿಗಿ, ಮಧ್ಯಾಹ್ನ 2 ಗಂಟೆಗೆ ಹರಪನಹಳ್ಳಿ ಹಾಗೂ ಸಂಜೆ 4.30 ಕ್ಕೆ ಹಗರಿಬೊಮ್ಮನಹಳ್ಳಿ ಉಪ ನೋಂದಣಿ ಕಛೇರಿಯಲ್ಲಿ ತರಬೇತಿ ಏರ್ಪಡಿಸಲಾಗಿದೆ. ಫೆಬ್ರವರಿ 3 ರಂದು ಮಧ್ಯಾಹ್ನ 12ಕ್ಕೆ ಹೂವಿನ ಹಡಗಲಿ ಹಾಗೂ ಮಧ್ಯಾಹ್ನ 3ಕ್ಕೆ ಹೊಸಪೇಟೆ ಉಪನೋಂದಣಿ ಕಛೇರಿ ತರಬೇತಿ ಆಯೋಜಿಸ ಲಾ ಗಿದೆ. ದಸ್ತಾವೇಜು ಬರಹಗಾರರು, ವಕೀಲರುಗಳು, ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳ ಸಿಬ್ಬಂದಿಯವರು, ಹಾಗೂ ಕಾಗದ ರಹಿತ ನೋಂದಣಿ ವ್ಯವಸ್ಥೆಯಲ್ಲಿ ಆಸಕ್ತಿ ಹೊಂದಿರುವ ಇತರೆ ಸಾರ್ವಜನಿಕರುಗಳು ತರಬೇತಿಗೆ ಹಾಜರಾಗಬಹುದು ಎಂದು ಪ್ರಕಟಣೆ ತಿಳಿಸಿದೆ.

ಒಂದನೇಯ ಪುಟದಿಂದ

ವಿದ್ಯಾರ್ಥಿಗಳು ಸಂಚಾರ ನಿಯಮಗಳನ್ನು ಪಾಲಿಸಬೇಕು: ಜಿಲ್ಲಾಧಿಕಾರಿ ನಿತೀಶ್ ಕೆ ಸಲಹೆ

ಪಾಲನೆ ಮಾಡದ ಕಾರಣಕ್ಕಾಗಿ ಹಾಗೂ ಹೆಲ್ಮೆಟ್ ಇಲ್ಲದೆ ಸಂಚಾರ ಮಾಡುತ್ತಿದ್ದರಿಂದ ಅಪಘಾತದಲ್ಲಿ ಸಾವುಗಳಾಗುತ್ತಿವೆ ಎಂದರು.

ನಗರದಲ್ಲಿ ಬಾರಿ ವಾಹನಗಳ ಸಂಚಾರ ತಡೆಗಾಗಿ ನಗರದ ಹೊರಗಡೆ ರಿಂಗ್ ರಸ್ತೆಗೆ ಈಗಾಗಲೇ ಟೆಂಡರ್ ಹಂತದಲ್ಲಿದ್ದು, ತ್ವರಿತವಾಗಿ ಕೈಗೊಳ್ಳಲಾಗುತ್ತದೆ. ಕಳೆದು ಹೋದ ಜೀವ ಯಾವತ್ತಿಗೂ ಬರುವುದಿಲ್ಲ. ತಮ್ಮನ್ನು ನಂಬಿಕೊಡಿರುವ ಕುಟುಂಬದ ಆಧಾರವಾಗಿರುವ ತಾವುಗಳು ವಾಹನ ಚಾಲನೆ ಮಾಡುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿಯೇ ವಾಹನ ಚಾಲನೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಈ ವೇಳೆ, ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಮಾತನಾಡಿ, ರಾಷ್ಟಿಯ ಹೆದ್ದಾರಿ ಪ್ರಾಧಿಕಾರದಿಂದ 500 ಹೆಲ್ಮೆಟ್ ವಿತರಣೆ ಮಾಡುತ್ತಿದ್ದು, ಹಲ್ಮೆಟ್ ಪಡೆದವರು ಕಡ್ಡಾಯವಾಗಿ ಧರಿಸಬೇಕು. ಹೆಲ್ಮೆಟ್ ಪಡೆದವರ ಹೆಸರು ಮತ್ತು ವಿಳಾಸ ನಮೂದಿಸಿಕೊಂಡಿದ್ದು, ಹೆಲ್ಮೆಟ್ ಇಲ್ಲದೆ ಸಂಚಾರ ಮಾಡಿದ ಸಂದರ್ಭದಲ್ಲಿ ಪೊಲೀಸ್ ಕೈಗೆ ಸಿಕ್ಕಲ್ಲಿ ಹೆಲ್ಮೆಟ್ ಹಾಕದೇ ಇರುವುದಕ್ಕೆ ದಂಡದ ಜೊತೆಗೆ ಹೆಲ್ಮೆಟ್ ಪಡೆದುಕೊಂಡು ಹಾಕದೇ ಇರುವುದಕ್ಕೆ ಮತ್ತೊಂದು ದಂಡ ಹಾಕಲಾಗುತ್ತದೆ ಎಂದರು.

ರಸ್ತೆ ನಿಯಮಗಳನ್ನು ಕಡ್ಡಾಯ ಪಾಲನೆ ಮಾಡಬೇಕು. ಅಪಘಾತದಲ್ಲಿ ವಾಹನ ಚಾಲನೆ ಪರವಾಗಿ ಇಲ್ಲದೆ ಸಾವಿನಪ್ಪಿದರೆ ದೊಡ್ಡ ಪ್ರಮಾಣದ ದಂಡದ ಜೊತೆಗೆ ಕ್ರಿಮಿನಲ್ ಪ್ರಕರಣ ದಾಖಲಾಗುತ್ತದೆ. ಎಫ್‌ಐರ್ಆ ದಾಖಲಾದಲ್ಲಿ ವಿದ್ಯಾಭ್ಯಾಸ ಮತ್ತು ಉದ್ಯೋಗಕ್ಕೆ ತೊಂದರೆ ಉಂಟಾಗುತ್ತದೆ ಎಂದರು.

ಈ ವೇಳೆ ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮಹೊಪಾತ್ರ ಅವರು ಮಾತನಾಡಿ, ರಸ್ತೆ ಅಪಘಾತದಲ್ಲಿ ಹೆಲ್ಮೆಟ್ ಇಲ್ಲದೇ ಜೀವ ಕಳೆದುಕೊಳ್ಳುವುದು ಹೆಚ್ಚಿದೆ. ರಸ್ತೆ ಸಂಚಾರದ ಸಮಯದಲ್ಲಿ ಯುವಕರು ಹೆಚ್ಚಾಗಿ ಬೈಕ್ ವೀಲಿಂಗ್ ಮಾಡುತ್ತಿರುವುದು ಗಮನಿಸಿದ್ದೇನೆ. ಇದನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಡು ಖುಷಿ ಪಡುತ್ತಿದ್ದಾರೆ. ಅಚಾತುರ್ಯ ಉಂಟಾದಲ್ಲಿ ಹೋದ ಜೀವ ಬರೋದಿಲ್ಲ. ಯುವಕರು ಇಂತಹ ಸಾಹಸ ಮಾಡುವುದು ಬಿಡಬೇಕು ಎಂದರು.

ಈ ವೇಳೆ ರಾಯಚೂರು ಡಿವೈ.ಎಸ್.ಪಿ ಶಾಂತವೀರ ಅವರು ಮಾತನಾಡಿ, ಯುವಕ ಹಾಗೂ ಯುವತಿಯರು ತಮ್ಮ ಇಷ್ಟದ ಮೊಬೈಲ್ ಹಾಳಾಗದಂತೆ ಕವರ್ ಹಾಕಿಸುತ್ತೀರಿ. ಅದಕ್ಕಿಂತ ದೊಡ್ಡದು ನಿಮ್ಮ ಜೀವನ ಉಳಿಸುವ ಹೆಲ್ಮೆಟ್ ಧರಿಸಿ ಸಂಚಾರ ನಿಯಮಗಳನ್ನು ಪಾಲನೆ ಮಾಡಬೇಕು. ರಸ್ತೆ ಅಪಘಾತದಲ್ಲಿ ಶೇ.70 ರಷ್ಟು ಹೆಲ್ಮೆಟ್ ಇಲ್ಲದೆ ಜೀವನ ಕಳೆದುಕೊಂಡಿದ್ದಾರೆ. ಕರ್ನಾಟಕದಲ್ಲಿ ಪ್ರತಿ ವರ್ಷ 12 ರಿಂದ 13 ಸಾವಿರ ಜನರು ರಸ್ತೆ ಅಪಘಾತಕ್ಕೆ ಈಡಾಗುತ್ತಿದ್ದಾರೆ ಎಂದರು.

ಇದೇ ಫೆಬ್ರುವರಿ 05, 06 ಹಾಗೂ 07ರಂದು ನಡೆಯುವ ರಾಯಚೂರು ಉತ್ಸವಕ್ಕೆ ಎಲ್ಲರೂ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಆಗಮಿಸಬೇಕು. ಪಾರ್ಕಿಂಗ್ ನಿಗದಿಪಡಿಸಿದ ಸ್ಥಳದಲ್ಲಿ ಮಾತ್ರ ವಾಹನಗಳನ್ನು ನಿಲ್ಲಿಸಬೇಕೆಂದು ಹೇಳಿದರು.

ಇದೇ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ, ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕರಾದ ಭಾವನೇಶ ಕುಮಾರ ಗುಪ್ತಾ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಪ್ರಭಾರಿ ರಿಜಿಸ್ಟರ್ ಗುರುರಾಜ ಬಿರಾದಾರ್, ಸಿಓಎಲ್ ಯೋಜನಾ ನಿರ್ದೇಶಕರಾದ ಎಮ್.ಡಿ.ಯೂಸೂಫ್ ಸೇರಿದಂತೆ ಅನೇಕರು ಇದರು.

ಮಾಹಿತಿ ಕೊಡದ ಅಧಿಕಾರಿಗಳಿಗೆ ದಂಡವಿಧಿಸಿ ಬಿಸಿ ಮುಟ್ಟಿಸಿದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್

ಅವರಿಗೆ ರೂ.25.000 ದಂಡ ವಿಧಿಸಿ ಆದೇಶ ಮಾಡಲಾಗಿದೆ ಎಂದು ಹೇಳಿದರು.

ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನ ಅಡಕಿ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಭಗವಂತರಾಯ ಮರಡಿ ಅವರಿಗೆ ಸಹ ರೂ.15,000 ರೂ. ದಂಢ ವಿಧಿಸಲಾಗಿದೆ. ರವಿ ಮದನಕರ್ ಎನ್ನುವರು 15ನೇ ಹಣಕಾಸು ಆಯೋಗದ ಅನುದಾನಕ್ಕೆ ಸಂಬಧಿಸಿದತೆ ಮಾಹಿತಿ ಕೋರಿ ದಿನಾಂಕ:07.08.2023 ರಂದು ಅರ್ಜಿ ಸಲ್ಲಿಸಿದ್ದರು. ಈ ಮಾಹಿತಿ ನೀಡದ ಕಾರಣ ಈ ಪ್ರಕರಣದಲ್ಲಿ ಸಲ್ಲಿಕೆಯದ ಮೇಲ್ಮನವಿ ಆಧಾರದ ಮೇಲೆ ದಿನಾಂಕ:15.09.2025ರದು ವಿಚಾರಣೆ ನಡೆಸಿ ದಂಡ ವಿಧಿಸುವ ಕುರಿತು ಭಗವಂತರಾಯ ಮರಡಿ ಅವರಿಗೆ ಎಚ್ಚರಿಕೆ ನೀಡಲಾಗಿತ್ತು. ಆದರೂ ಅವರು ಅರ್ಜಿದಾರರಿಗೆ ಮಾಹಿತಿ ನೀಡಿದ ಕಾರಣ ದಿನಾಂಕ:23.01.2026 ರಂದು ವಿಚಾರಣೆ ವೇಳ ಪಿ.ಡಿ.ಓ ಭಗವಂತರಾಯ ಮರಡಿ ಗೈರು ಹಾಜರಾಗಿ ಮಾಹಿತಿ ನೀಡದ ಕಾರಣ ರೂ. 15,000 ದಂಡ ವಿಧಿಸಲಾಗಿದೆ ಎಂದು ತಿಳಿಸಿದರು.

ನವೆಂಬರ್ 2025ರಿಂದ ವಿಚಾರಣೆ ಆರಂಭಿಸಿ 2010 ರಿಂದ 2022ರವರೆಗಿನ 357 ಪ್ರಕರಣಗಳನ್ನು ವಿಚಾರಣೆ ನಡೆಸಿ ಈ ಪೈಕಿ 282 ವಿಲೇವಾರಿ ಮಾಡಲಾಗಿದೆ. 2023ರಿಂದ ದಾಖಲಾದ ಪ್ರಕರಣಗಳನ್ನು 2026ರ ಜನವರಿಯಿಂದ ವಿಚಾರಣೆ ನಡೆಸಲಾಗುತ್ತಿದೆ ಎಂದು ಹೇಳಿದರು.

2025ರ ನವೆಂಬರ್ 24 ರಿಂದ 2026ರ ಜನವರಿ 30ರವರೆಗೆ 992 ಪ್ರಕರಣಗಳ ವಿಚಾರಣೆ ನಡೆಸಿ ಈ ಪೈಕಿ 400 ಪ್ರಕರಗಳನ್ನು ವಿಲೇವಾರಿ ಮಾಡಲಾಗಿದೆ. ಈಗಾಗಲೇ ಮುಂಚಿನ ಆಯುಕ್ತರು ವಿಚಾರಣೆ ನಡೆಸಿದ ಬಾಕಿ ಹಳೆಯ ಪ್ರಕರಣಗಳು 882 ಇದ್ದು ಬರುವ ಮಾರ್ಚ ತಿಂಗಳಲ್ಲಿ ಈ ಪ್ರಕರಣಗಳನ್ನು ವಿಚಾರಣೆಗೆ ತೆಗೆದುಕೊಳ್ಳಲಾಗುವುದು ಎಂದು ವಿವರಿಸಿದರು.

ಕಲಬುರಗಿ ಪೀಠದಲ್ಲಿ 19(3) ಅರ್ಜಿ ಸ್ವೀಕಾರ: ಈ ಮೊದಲು ಬೆಂಗಳೂರಿನಲ್ಲಿ ಮಾಹಿತಿ ಹಕ್ಕು ಕಾಯಿದೆಯಡಿ 19(3)ರಡಿ ಮೇಲ್ಮನವಿ ಅರ್ಜಿಗಳನ್ನು ಪಡೆಯಲಾಗುತ್ತಿತ್ತು. ಆದರೆ, ಈಗ ಮಾಹಿತಿ ಹಕ್ಕು 19(3) ರಡಿ ಮೇಲ್ಮನವಿ ಅರ್ಜಿಗಳನ್ನು ಕಲಬುರಗಿ ಪೀಠದಲ್ಲಿ ಪಡೆದು ಪರಿಶೀಲನೆ ಮಾಡಿ 2026ರ ಫೆಬ್ರವರಿಯಿಂದ ವಿಚಾರಣೆ ಕೈಗೊಳ್ಳಲಾಗುತ್ತದೆ ಎಂದರು.

ಕೊಪ್ಪಳ ಜಿಲ್ಲೆಯಲ್ಲಿ ಕಾರ್ಯಗಾರ: ಮಾಹಿತಿ ಹಕ್ಕು ಕಾಯಿದೆ ಕಾರ್ಯಾಗಾರವು ಈಗಾಗಲೇ ಬೀದರ ಮತ್ತು ಬಳ್ಳಾರಿಯಲ್ಲಿ ಮುಗಿದಿದ್ದು, ಫೆಬ್ರವರಿ ಮಾಹೆಯಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ನಿಗದಿಮಾಡಿದೆ. ಪ್ರಸ್ತುತ ಕಲಬುರಗಿ ಪೀಠದಲ್ಲಿ 6691 ಪ್ರಕರಣಗಳು ಬಾಕಿ ಇದ್ದು, ತ್ವರಿತ ವಿಲೇವಾರಿಗೆ ಕ್ರಮ ವಹಿಸಲಾಗುವುದು ಎಂದು ಅವರು ತಿಳಿಸಿದರು.

ದಂಡ ವಸೂಲಿ: ಸದ್ಯ ಬಾಗಲಕೋಟೆಯಲ್ಲಿರುವ ಈ ಹಿಂದೆ ಕೊಪ್ಪಳ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ರಾಜಕುಮಾರ ಯರಗಲ್ ಅವರಿಂದ 10 ಸಾವಿರ ರೂ. ದಂಡ, ಅದೇ ರೀತಿ ರಾಯಚೂರಿನ ಯರಮರಸ್ ಡಯಟನ್‌ನ ಹಿರಿಯ ಉಪನ್ಯಾಸಕರಾದ ಮಲ್ಲಿಕಾರ್ಜುನ ಅವರಿಂದ 15,000 ರೂ. ದಂಡ ವಸೂಲಿ ಮಾಡಲಾಗಿದೆ ಎಂದು ಮಾಹಿತಿ ಆಯುಕ್ತರಾದ ಬಿ.ವೆಂಕಟ್ ಸಿಂಗ್ ಅವರು ಮಾಹಿತಿ ನೀಡಿದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆ ಜಾಗೃತಿ ಸಂಚಾರಿ ರಥಕ್ಕೆ ಚಾಲನೆ ಮಕ್ಕಳು ಭವಿಷ್ಯ ರೂಪಿಸಿಕೊಳ್ಳುವತ್ತ ಗಮನ ಹರಿಸಲಿ: ನ್ಯಾ.ಸಾತ್ವಿಕ್ ಸಲಹೆ

ಶಿಕ್ಷಣ ಅಧಿಕಾರಿ ಈರಣ್ಣ ಕೋಸಗಿ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಸುದರ್ಶನ್ ಹಾಗೂ ಕಾಲೇಜಿನ ಪ್ರಾಚಾರ್ಯ ಕುಂಟೆಪ್ಪ, ಪ್ರೌಢ ಶಾಲೆಯ ಮುಖ್ಯ ಶಿಕ್ಷಕ ಶ್ರೀನಿವಾಸ್ ಹಾಗೂ ಮಾರ್ಗದರ್ಶಿ ಸಂಸ್ಥೆಯ ಅನಂದರಾಜ್ ಸೇರಿದಂತೆ ವಿವಿಧ ಇಲಾಖೆಗಳ ಸಿಬ್ಬಂದಿ ಇದ್ದರು

ಮಾತಾ ನಾಗರ ಯಲ್ಲಮ್ಮ ದೇವಿ ಜಾತ್ರಾ ಮಹೋತ್ಸವಕ್ಕೆ ಚಾಲನೆ

ಫೆ.6ರವರೆಗೆ ಧಾರ್ಮಿಕ ಸಾಂಸ್ಕೃತಿಕ ಕಾರ್ಯಕ್ರಮ

ಶ್ರೀ ಹುಲಿಗೆಮ್ಮ ದೇವಿ'' ಎಂಬ ಭಕ್ತಿ ಪ್ರಧಾನ ನಾಟಕ ಪ್ರದರ್ಶನಗೊಳ್ಳಲಿದೆ. ಜಾತ್ರಾ ಮಹೋತ್ಸವದ ಅಂತಿಮ ದಿನವಾದ ಫೆಬ್ರವರಿ 6ರಂದು ಕಳಸಾವರೋಹಣ, ಕುಂಕುಮ ವಿತರಣೆ ಹಾಗೂ ಅಖಂಡ ಭಜನಾ ಕಾರ್ಯಕ್ರಮ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ದೇವಸ್ಥಾನ ಸಮಿತಿಯ ಅಧ್ಯಕ್ಷ ಆಣಿವೀರಯ್ಯ, ಸೇವಾ ಸಮಿತಿ ಸದಸ್ಯರು, ಯುವ ಮಂಡಳಿ ಹಾಗೂ ಸಾಂಸ್ಕೃತಿಕ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀ ಮಾತಾ ನಾಗರ ಯಲ್ಲಮ್ಮ ದೇವಿಯ ಆಶೀರ್ವಾದ ಪಡೆಯಬೇಕು ಎಂದು ದೇವಸ್ಥಾನ ಸೇವಾ ಸಮಿತಿ ಮನವಿ ಮಾಡಿದೆ.

ಫೆ. 2ರಂದು ವಿಜಯಪುರದಲ್ಲಿ ಬೃಹತ್ ಉದ್ಯೋಗ ಮೇಳ

ವಿಜಯಪುರ, ಜ. 31:ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಹಾಗೂ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತಿ ಇವರ ಸಹಯೋಗದಲ್ಲಿ ಫೆ.2ರಂದು ಬೆಳಿಗ್ಗೆ 9ರಿಂದ ಸಂಜೆ 5ರವರೆಗೆ ಯುವ ಸಮೃದ್ಧಿ ಸಮ್ಮೇಳನ- ವಿಜಯಪುರ ಉದ್ಯೋಗ ಮೇಳವನ್ನು ದರಬಾರ ಹೈಸ್ಕೂಲ್ ಆವರಣದಲ್ಲಿ ಆಯೋಜಿಸಲಾಗಿದೆ.

ನಗರದ ಹೊಸ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ

ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಕಾಂತಾ ನಾಯ್ಕ ಅವರು ಉದ್ಯೋಗ ಮೇಳದ ಕುರಿತು ವಿವರ ಹಂಚಿಕೊಡರು.

ಈ ಪತ್ರಿಕಾಗೋಷ್ಠಿಯಲ್ಲಿ ಪಾಲಿಕೆ ಸದಸ್ಯೆ ಆರತಿ ಶಹಾಪೂರ, ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ,ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬದ್ರುದ್ದಿನ ಸೌದಾಗರ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಮಹೇಶ ಮಾಳ ವಾಡಕರ, ಬಾಗಲಕೋಟೆ ಜಿಲ್ಲಾ ಕೌಶಲ್ಯಾಧಿಕಾರಿ ಗುರುಪಾದಯ್ಯ ಹಿರೇಮಠ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿ.ಕೆ.ಹೊಸಮನಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.



ಸಂಗಾಪುರದಲ್ಲಿ ಜಾನಪದ ಸಂಗೀತದ ಮೂಲಕ ಗ್ಯಾರಂಟಿ ಪ್ರಚಾರ

ಕೊಪ್ಪಳ ,ಜ.30–

ರಾಜ್ಯದಲ್ಲಿ ಪ್ರಸ್ತುತ ಸರಕಾರ ಬಂದನಂತರ ಬಡಜನರ ನಾಡಿ ಮಿಡಿತ ಅರಿತು ಸರ್ವರ ಅನುಕೂಲಕ್ಕಾಗಿ ಗ್ಯಾರಂಟಿ ಯೋಜನೆಗಳನ್ನು ರೂಪಿಸಿ ಜಾರಿಗೆ ತಂದು ಮಹತ್ವದ ಕಾರ್ಯ ಮಾಡಿದೆ. ವಿಶೇಷವಾಗಿ ದೇಶದಲ್ಲಿಯೇ ಈ ರೀತಿಯ ಬಡವರ ಯೋಜನೆ ಜಾರಿಗೆ ತಂದಿರುವುದು ಪ್ರಥಮ ಎನ್ನಬಹುದು ಎಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮುಖ್ಯಕಾರ್ಯನಿರ್ವಾಹಕ ಚನ್ನಯ್ಯ ಹಿರೇಮಠ ಹೇಳಿದರು.

ಅವರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯವರ ಸಹಯೋಗದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಸಾಂಸ್ಕೃತಿಕ ಸಮಗ್ರ ಗ್ರಾಮೀಣಾಭಿವೃದ್ಧಿ ಸಂಸ್ಥೆ (ರಿ) ಕುಷ್ಟಗಿ ಕಲಾತಂಡದವರು ಗಂಗಾವತಿ ತಾಲೂಕಿನ ಸಂಗಾಪುರ ಗ್ರಾಮದಲ್ಲಿ ಏರ್ಪಡಿಸಿದ್ದ ಸರಕಾರದ ಗ್ಯಾರಂಟಿ ಯೋಜನೆಗಳ ಪ್ರಚಾರ ಸಾಂಸ್ಕೃತಿಕ ಕಾರ್ಯಕ್ರಮವನ್ನು ತಮಟೆ ನುಡಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಗ್ರಾಮದ ಗಣ್ಯರಾದ ಜಿಲಾನಿ ಸಾಹೇಬ್, ಮಂಜು ಹುಲಸಗೇರಿ ಭಾಗವಹಿಸಿದ್ದರು. ಮಹಿಳಾ ಮಂಡಳದ ಗಂಗಮ್ಮ ಹಿರೇಮನಿ, ಮೀನಾಕ್ಷಮ್ಮ, ಪಾರವ್ವ, ರತ್ನಮ್ಮ ಉಪಸ್ಥಿತರಿದ್ದರು. ನಂತರ ಕಲಾತಂಡದಿಂದ ಸರಕಾರದ ಪಂಚ ಯಾರಂಟಿ ಯೋಜನೆಗಳ ಮಹತ್ವ, ಆರೋಗ್ಯ, ಶಿಕ್ಷಣ ಕುರಿತು ವಿವಿಧ ಜಾನಪದ ಗೀತೆಗಳು ಹಾಗೂ ಸಂಭಾಷಣೆಯ ಮೂಲಕ ಪ್ರಸ್ತುತಪಡಿಸಿ ಜನ-ಮನ ರಂಜಿಸಿದರು.

ಕಲಾತಂಡದಲ್ಲಿ ನಿಂಗಪ್ಪ ಸೊಲ್ಲಾಪೂರ, ರಾಮಣ್ಣ ಮುರಡಿ, ಗೌರಮ್ಮ ಕುರಿ ಭಾಗವಹಿಸಿದ್ದರು. ಗಂಗಾವತಿ ತಾಲೂಕಿನ ವಿವಿಧ 20 ಗ್ರಾಮಗಳಲ್ಲಿ ಕಲಾತಂಡವು ಸರಕಾರದ ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡು ಜನರಿಗೆ ಸರಕಾರದ ಯೋಜನೆಗಳ ಕುರಿತು ಜಾನಪದ ಗೀತೆಗಳು ಮತ್ತು ಸಂಭಾಷಣೆಯ ಮೂಲಕ ಜಾಗೃತಿ ಮೂಡಿಸುತ್ತಿದೆ.



ಎಸ್.ಎಸ್.ಎಲ್.ಸಿ. ಫಲಿತಾಂಶ ಹೆಚ್ಚಳಕ್ಕೆ ಶಿಕ್ಷಕರಿಗೆ ಜಿ.ಪಂ.ಸಿ.ಇ.ಓ ಸೂಚನೆ

ಕಲಬುರಗಿ,ಜ.31–

ಸೇಡಂ ತಾಲೂಕಿನ ಇಟಕಾಲ್ ಸರ್ಕಾರಿ ಪ್ರೌಢಶಾಲೆಗೆ ಗುರುವಾರ ಜಿಲ್ಲಾ ಪಂಚಾಯತ ಸಿ.ಇ.ಓ ಭಂವರಸಿಂಗ್ ಮೀನಾ ಅವರು ಭೇಟಿ ನೀಡಿ ಅರ್ಧಗಂಟೆಕ್ಕಿಂತ ಹೆಚ್ಚಿನ ಹೊತ್ತು 10ನೇ ತರಗತಿ ಮಕ್ಕಳೊಂದಿಗೆ ಕಳೆದಿದ್ದಲ್ಲದೆ ಕನ್ನಡ ವಿಷಯ ಬೋಧನೆ ಮಾಡುವ ಮೂಲಕ ಕನ್ನಡ ಮೇಷ್ಟ್ರಾಗಿ ಗಮನ ಸೆಳೆದರು.

ಈ ಸಂದರ್ಭದಲ್ಲಿ ಮಕ್ಕಳೊಂದಿಗೆ ಸಂವಾದ ನಡೆಸಿ ಮಾತನಾಡಿದ ಅವರು, ಎಸ್.ಎಸ್.ಎಲ್.ಸಿ ಪರೀಕ್ಷೆ ನಿಮ್ಮ ಜೀವನದ ಅತ್ಯಮೂಲ್ಯ ಘಟ್ಟವಾಗಿದ್ದು, ಸಮಯ ವ್ಯರ್ಥ ಮಾಡದೆ ಓದಿನತ್ತ ಹೆಚ್ಚು ಗಮನ ಹರಿಸಬೇಕು. ಕಾಲಹರಣ ಮಾಡದೆ ಸಮಯಕ್ಕೆ ಬೆಲೆ ಕೊಡಬೇಕು. ಅಂದಾಗ ಭವಿಷ್ಯದಲ್ಲಿ ಏನಾದರು ಸಾದಿಸುವಿರಿ ಎಂದು ಮಕ್ಕಳಿಗೆ ಪ್ರೋತ್ಸಾಹದಾಯಕ ಮಾತುಗಳನ್ನಾಡಿದರು.

ಇನ್ನು ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ ಸುಧಾರಣೆಯಾಗಬೇಕು. ಫಲಿತಾಂಶ ಹೆಚ್ಚಿಸಲು ಶಿಕ್ಷಕರು ಹೆಚ್ಚು ಮುತುವರ್ಜಿ ವಹಿಸಬೇಕು. ಮಕ್ಕಳ ಮೇಲೆ ವಿಶೇಷ ಗಮನ ಹರಿಸಬೇಕು ಎಂದರಲ್ಲದೆ ಅರಿವೇ ಗುರು ಪುಸ್ತಕದ ಮಹತ್ವ ಹಾಗೂ ಪರೀಕ್ಷೆಗೆ ಈ ಪುಸ್ತಕ ತುಂಬಾ ಉಪಯುಕ್ತ ವಾಗಿದ್ದು ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ತಿಳಿಸಿದರು. ನಂತರ ಅಕ್ಷರ ದಾಸೋಹ ಬಿಸಿಯೂಟ ಕೋಣೆಗೆ ಭೇಟಿ ನೀಡಿದ ಭಂವರ್ ಸಿಂಗ್ ಮೀನಾ ಅವರು, ಬೇಳೆ, ಅಕ್ಕಿ, ಹಾಲಿನ ಪುಡಿ, ರಾಗಿ, ಎಣ್ಣೆ ಹಾಗೂ ಇನ್ನಿತರ ಪದಾರ್ಥಗಳನ್ನು ಪರಿಶೀಲಿಸಿ ಮಕ್ಕಳಿಗೆ ನೀಡುವ ಬಿಸಿಯೂಟ ಗುಣಮಟ್ಟದಿಂದಿರಬೇಕು.



ಮಹಾತ್ಮ ಗಾಂಧೀಜಿ ಅವರ ಪುಣ್ಯ ಸ್ಮರಣೆ

ಕೊಪ್ಪಳ ಜ.31–

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಪ್ಪಳ ಜಿಲ್ಲಾ ಕ್ಷಯರೋಗ ಮತ್ತು ಕುಷ್ಠರೋಗ ನಿರ್ಮೂಲ ನಾಧಿಕಾರಿಗಳ ಕಾರ್ಯಾಲಯ ಕೊಪ್ಪಳ, ಇವರ ಸಹಯೋಗದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜೀ ಅವರ ಹುತಾತ್ಮರಾದ ಈ ದಿನದಂದು ಶ್ರದ್ಧಾಪೂರ್ವಕವಾಗಿ ಸ್ಮರಿಸಿ, ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮ ಜಿಲ್ಲಾಡಳಿತ ಭವನದಲ್ಲಿ ಶುಕ್ರವಾರ ನಡೆಯಿತು.

ಜಿಲ್ಲಾಧಿಕಾರಿ ಡಾ.ಸುರೇಶ್ ಬಿ. ಇಟ್ನಾಳ ಅವರು ಮಾತನಾಡಿ, ಗ್ರಾಮೀಣ ಪ್ರದೇಶಗಳಿಗೆ ಅಧಿಕಾರಿಗಳು ಹೋಗಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ ಕುರಿತು ಜಾಗೃತಿ ಮೂಡಿಸಿ ಕುಷ್ಠರೋಗವನ್ನು ಪತ್ತೆಹಚ್ಚಿ ಚಿಕಿತ್ಸೆ ಕೊಡುವ ಕೆಲಸ ಮಾಡಬೇಕು.

ಈ ರೋಗದ ತಪ್ಪು ಕಲ್ಪನೆಗಳನ್ನು ಜನರಲ್ಲಿ ಹೋಗ ಲಾಡಿಸಿ ''ತಾರತಮ್ಯವನ್ನು ಕೊನೆ ಗೊಳಿಸುವುದು, ಘನತೆಯನ್ನು ಕಾಪಾಡುವುದು'' ಎಂಬ ಘೋಷವಾಕ್ಯ ವನ್ನು ಹೇಳಿ, ''ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ -2026'' ಕರಪತ್ರಗಳನ್ನು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಟಿ.ಲಿಂಗರಾಜು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಸುರಪುರ: ರಾಷ್ಟ್ರೀಯ ಸ್ವಚ್ಛತಾ ದಿನಾಚರಣೆ



ಸುರಪುರ,ಜ.30–

ತಾಲೂಕು ಕಾನೂನು ಸೇವಾ ಸಮಿತಿ ಸುರಪುರ, ತಾಲೂಕು ವಕೀಲರ ಸಂಘ, ತಾಲೂಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶ್ರೀ ಪ್ರಭು ಮಹಾವಿದ್ಯಾಲಯ ಸುರಪುರ ಇವರುಗಳ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಸ್ವಚ್ಛತಾ ದಿನದ ಅಂಗವಾಗಿ ನಗರದ ತಾಲೂಕ ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿ ಸ್ವಚ್ಛತಾ ಕಾರ್ಯವನ್ನ ನಡೆಸಿ ಶ್ರಮದಾನ ಕಾರ್ಯಕ್ರಮವನ್ನು ಆಚರಿ ಸಲಾಗಿದೆ.

ಜಿಲ್ಲಾ ಹೆಚ್ಚುವರಿ ನ್ಯಾಯಾಲಯದ ನ್ಯಾಯಾಧೀಶರಾದ ಯಮುನಪ್ಪ ಬಮ್ಮಣಗಿ,ಹಿರಿಯ ಸಿವಿಲ್ ನ್ಯಾಯಾಧೀಶರಾದ ಫಕೀರವ್ವ ಕೆಳಗೇರಿ ಭಾಗವಹಿಸಿ ಶ್ರಮದಾನಕ್ಕೆ ಚಾಲನೆ ನೀಡಿ ಮಾತನಾಡಿ, ಪರಿಸರ ಸ್ವಚ್ಛವಾಗಿದ್ದರೆ ಸಮಾಜವು ಸ್ವಾಸ್ಥ್ಯ ವಾಗಿರಲಿದೆ. ಸ್ವಚ್ಛತೆ ಎನ್ನುವುದು ತುಂಬಾ ಮುಖ್ಯವಾಗಿದೆ ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಮನೆಯಂತೆ ಪರಿಸರವನ್ನು ಸ್ವಚ್ಛವಾಗಿರಬೇಕು ಮತ್ತು ಸ್ವಚ್ಛತೆಯ ಕಡೆಗೆ ಸದಾ ಕಾಲ ಗಮನಹರಿಸಬೇಕು ಎಂದು ತಿಳಿಸಿ ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲೂಕ ಆರೋಗ್ಯ ಅಧಿಕಾರಿ ಡಾ.ರಾಜಾ ವೆಂಕಪ್ಪ ನಾಯಕ ಮಾತನಾಡಿ, ರಾಷ್ಟ್ರೀಯ ಸ್ವಚ್ಛತಾ ದಿನದ ಅಂಗವಾಗಿ ಹಮ್ಮಿಕೊಂಡಿರುವ ಶ್ರಮದಾನ ಕಾರ್ಯಕ್ರಮ ಹಾಗೂ ಕಾನೂನು ಅರಿವು ನೆರವು ಕಾರ್ಯಕ್ರಮದಲ್ಲಿ ನ್ಯಾಯಾಧೀಶರು ಭಾಗವಹಿಸಿ ಸ್ವಚ್ಛತೆಯಲ್ಲಿ ಅವರು ಕೂಡ ಭಾಗಿಯಾಗಿರುವುದು ಎಲ್ಲರಿ ಗೂ ಮಾದರಿಯಾಗಿದೆ ಎಂದರು.

ನ್ಯಾಯಾಧೀಶರು, ನ್ಯಾಯವಾದಿ ಗಳು ಹಾಗೂ ಅಧಿಕಾರಿಗಳು ಪೊರಕೆ ಹಿಡಿದು ಇಡೀ ಆಸ್ಪತ್ರೆಯ ಆವರಣ ಸ್ವಚ್ಛಗೊಳಿಸುವ ಮೂಲಕ ಶ್ರಮದಾನ ಕಾರ್ಯಕ್ರಮ ಆಚರಿಸಿರುವುದು ಎಲ್ಲರ ಮೆಚ್ಚುಗೆಗೂ ಪಾತ್ರವಾಗಿದೆ.

ಈ ಸಂದರ್ಭದಲ್ಲಿ ತಾಲೂಕ ವಕೀಲರ ಸಂಘದ ಅಧ್ಯಕ್ಷ ರಮಾನಂದ ಕವಲಿ, ಪ್ರಭು ಮಹಾವಿದ್ಯಾಲಯದ ಪ್ರಾಚಾರ್ಯ ವಿರೂಪಾಕ್ಷಿ ಎಚ್, ಹಿರಿಯ ವಕೀಲ ಗುರುಪಾದಪ್ಪ ಬನ್ನಾಳ, ಉಪನ್ಯಾಸಕ ಭೀಮಪ್ಪ ದೊಡ್ಡಮನಿ, ಪಿಎ??? ಕೃಷ್ಣ ಸುಬೇದಾರ್, ಹಿರಿಯ ವಕೀಲ ಶಿವಾನಂದ ಅವಂಟಿ, ನಗರ ಸಭೆಯ ಮೈನುದ್ದೀನ್, ಹೋರಾಟಗಾರ ಹನುಮಂತ ಕಟ್ಟಿಮನಿ ಸೇರಿದಂತೆ ಎನ್‌ಸಿಸಿ ಕೆಡೆಟ್ ಗಳು, ಪೌರಕಾರ್ಮಿಕರು ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಫೆ 15 ರಂದು ಶ್ರೀ ಸಂತ ಸೇವಾಲಾಲ ಜಯಂತಿ ವಿಜೃಂಭಣೆಯಿಂದ ಆಚರಿಸಲು ನಿರ್ಧಾರ

ಕಲಬುರಗಿ,ಜ.30–

ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರೀ ಸಂತ ಸೇವಾಲಾಲ ಜಯಂತಿಯನ್ನು ಫೆಬ್ರವರಿ 15 ರಂದು ವಿಜೃಂಭಣೆಯಿಂದ ಆಚರಿಸಲು ಅಪರ ಜಿಲ್ಲಾಧಿಕಾರಿಯಾದ ರಾಯಪ್ಪ ಹುಣಸಗಿ ಅವರ ಅಧ್ಯಕ್ಷತೆಯಲ್ಲಿ ನಿರ್ಧರಿಸಲಾಯಿತು.



ಇತ್ತೀಚಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಇದೇ ಫೆಬ್ರವರಿ 15 ರಂದು ರವಿವಾರ ಮಧ್ಯಾಹ್ನ 2 ಗಂಟೆಗೆ ಕಲಬುರಗಿ ನಗರದ ಡಾ. ಎಸ್.ಎಂ ಪಂಡಿತ ರಂಗಮಂದಿರದಲ್ಲಿ ಶ್ರೀ ಸಂತ ಸೇವಾಲಾಲ ಜಯಂತಿ ಕಾರ್ಯಕ್ರಮ ಜರುಗಲಿದ್ದು, ಈ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು.

ಅಂದು ಬೆಳಿಗ್ಗೆ 9 ಗಂಟೆಗೆ ಕಡ್ಡಾಯವಾಗಿ ಎಲ್ಲಾ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸರ್ಕಾರಿ ಕಚೇರಿಗಳಲ್ಲಿ, ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು. ಸಭೆಯಲ್ಲಿ ನುರಿತ ಉಪನ್ಯಾಸಕರನ್ನು ಸಹ ಆಹ್ವಾನಿಸಲು ತೀರ್ಮಾನಿಸಲಾಯಿತು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದರ ಜೊತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಜಯಂತಿ ಸಮಿತಿ ಅಧ್ಯಕ್ಷರಾಗಿ ರೇವು ನಾಯಕ್ ಬೆಳಮಗಿ, ಉಪನ್ಯಾಸಕರಾಗಿ ಡಾ. ಗಣಪತಿ ರಾಠೋಡ ಹಾಗೂ ವಿನೋದ್ ಎಲ್ ಚವ್ಹಾಣ ಕಾರ್ಯ ಕ್ರಮದ ನಿರೂಪಕರನ್ನಾಗಿ ಆಯ್ಕೆ ಮಾಡಲಾಯಿತು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ಜಗದೀಶ್ವರಿ ನಾಶಿ ಅವರು ಪ್ರೋಟೋಕಾಲ್ ಪ್ರಕಾರ ಕಾರ್ಯಕ್ರಮ ಪತ್ರಿಕಾ ಆಮಂತ್ರಣ ಮುದ್ರಿಸಲಾಗುವುದು. ನಾಡಗೀತೆ, ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು ಎಂದರು. ವೇದಿಕೆ ಮೇಲೆ ಜಿಲ್ಲಾಧಿಕಾರಿ ಕಚೇರಿಯ ಚುನಾವಣೆ ಶಾಖೆ ತಹಶೀಲ್ದಾರರಾದ ಪಂಪಯ್ಯ ಸೇರಿದಂತೆ ಸಮಾಜದ ಮುಖಂಡ 'ರಾದ ವಿಜಯಕುಮಾರ್ ರಾಠೋಡ್, ರಮೇಶ್ ಬಿ. ಚವ್ಹಾಣ್, ಲಲಿತಾಬಾಯಿ ಆರ್, ರೇಣುಕಾ ರಾಠೋಡ್, ಪ್ರಶಾಂತ್ ರಾಠೋಡ್, ಭೀಮಸಿಂಗ್ ರಾಠೋಡ್, ನಾರಾಯಣ್ ದಿವಾಕರ್ ಇತರರು ಉಪಸ್ಥಿತರಿದ್ದರು.

ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ್‌ಕ್ಕೆ ಚಾಲನೆ: ಕುಷ್ಠ ರೋಗ ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲರೂ ಕೈಜೋಡಿಸಿ-ರಾಜಶೇಖರ ಪಾಟೀಲ

ಬೀದರ, ಜ.31–

ಕುಷ್ಠರೋಗವು ಒಂದು ಸಾಂಕ್ರಾಮಿಕ ರೋಗ, ಇದು ಯಾವುದೇ ಶಾಪ ಪಾಪ ದಿಂದ ಬರುವುದಿಲ್ಲ ಆದ್ದರಿಂದ ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಕೈ ಜೋಡಿಸಿದಾಗ ಮಾತ್ರ ಬೀದರ ಜಿಲ್ಲೆಯು ಕುಷ್ಠರೋಗ ಮುಕ್ತ ಜಿಲ್ಲೆ ಮಾಡಬಹುದು ಎಂದು ಬೀದರನ ಡಿವಿಬಿಡಿಸಿಓ ಅಧಿಕಾರಿ ಡಾ.ರಾಜಶೇಖರ ಪಾಟೀಲ ಹೇಳಿದರು.



ಅವರು ಶುಕ್ರವಾರ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 'ಹುತಾತ್ಮದಿನ' ನಿಮಿತ್ಯ ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ-2026ರ ''ತಾರತಮ್ಯವನ್ನು ಕೊನೆಗೊಳಿಸುವುದು, ಘನತೆಯನ್ನು ಖಚಿತಪಡಿಸುವುದು'' ಎಂಬ ಘೋಷಣೆಯೊಂದಿಗೆ'' ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಿಂದ ಹಮ್ಮಿಕೊಂಡಿದ್ದ ಅರಿವು ಅಭಿಯಾನದ ರ್ಯಾಲಿಗೆ ಚಾಲನೆ ನೀಡಿ ಮಾತನಾಡಿದರು.

ಕುಷ್ಠರೋಗವು ಒಂದು ಸಾಂಕ್ರಮಿಕ ರೋಗವಾಗಿದ್ದು ಇದು ಮುಖ್ಯವಾಗಿ ಚರ್ಮ ಹಾಗೂ ನರಕ್ಕೆ ಸಂಭಂಧಪಟ್ಟಿದ್ದು ದೇಹದ ಮೇಲೆ ಯಾವುದೇ ತರಹದ ಮಚ್ಚೆಗಳು ಇದಲ್ಲಿ ತಮ್ಮ ಸಮೀಪದ ಪ್ರಾಥಮೀಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ರೋಗ ಕಂಡು ಬಂದಲ್ಲಿ ಇದನ್ನು ಬಹುಔಷದಿ ಚಿಕಿತ್ಸೆಯಿಂದ ಗುಣ ಪಡಿಸಬಹುದು ಇದಕ್ಕೆ ಯಾವುದೇ ರೀತಿಯ ಹೆದರುವಂತಹ ಅಗತ್ಯವಿಲ್ಲಾ ಎಂದರು.

ಡಾ.ಶಂಕ್ರೆಪ್ಪಾ ಬೊಮಾ ಮಾತನಾಡಿ, ಇಂದು ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 'ಹುತಾತ್ಮದಿನ' ಈ ದಿನ ರಾಷ್ಟ್ರೀಯ ಕುಷ್ಠರೋಗ ದಿನವೆಂದು ಆಚರಿಸುತ್ತಿರುವುದು, ಜಿಲ್ಲೆಯಲ್ಲಿ ಕುಷ್ಟರೊಗದ ಚಿಕಿತ್ಸೆ ಪಡೆಯುತ್ತಿರುವರ ಸಂಖ್ಯೆ 64 ಯಾಗಿದ್ದು ಈ ವರ್ಷ 51 ಹೊಸ ಪ್ರಕರಣಗಳು ಪತ್ತೆ ಹಚ್ಚಿ ಚಿಕಿತ್ಸೆ ನಿಡಲಾಗುತ್ತಿದೆ. ಸ್ಪರ್ಶ್ ಕುಷ್ಠರೋಗ ಜಾಗೃತಿ ಪಾಕ್ಷಿಕ ಅಭಿಯಾನವನ್ನು ಜ.30 ರಿಂದ ಫೆ.13 ರವರೆಗೆ ಜಿಲ್ಲೆಯಾದ್ಯಂತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕಾಗಿ ಬನ್ನಿರಿ ಎಲ್ಲರು ಭಾರತವನ್ನು ಕುಷ್ಠರೋಗ ಮುಕ್ತ ಮಾಡಲು ಪ್ರತಿಜ್ಞಾ ಮಾಡೋಣ ಎಂದು ಕರೆಕೊಟ್ಟರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಸಂಗಪ್ಪ ಕಾಂಬ್ಳೆ ಅವರು ಎಲ್ಲಾ ನರ್ಸಿಂಗ ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿ ವರ್ಗದವರಿಗೆ ಪ್ರತಿಜ್ಞೆ ಮಾಡಿದರು.

ಈ ಸಂದರ್ಭದಲ್ಲಿ ತಾಲೂಕಾ ಅರೋಗ್ಯ ಅಧಿಕಾರಿ ಡಾ.ಸಂಗಾರಡ್ಡಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೀರಶೆಟ್ಟಿ ಚನ್ನಶೆಟ್ಟಿ, ಮೇಲ್ವಿಚಾರಕರಾದ ಆರೋಗ್ಯ ಶಿಕ್ಷಣಾಧಿಕಾರಿ ಓಂಕಾರ ಮಲ್ಲಿಗೆ ಸೇರಿದಂತೆ ಸಿಬ್ಬಂದಿಗಳು, ನರ್ಸಿಂಗ್ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಸಿಮಪ್ಪಾ ಆಪ್ತ ಸಮಾಲೋಚಕರು, ಮಾನಸಿಕ ವಿಭಾಗ ಇವರು ನಡೆಸಿಕೊಟ್ಟರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಮೊಯಿದ್ ಖಾನ್ ಖುಲಾಸೆ; ಮೋದಿಯುಗದ ನಿರಾಧಾರ ಮುಸ್ಲಿಂ ದ್ವೇಷಕ್ಕೆ ಮತ್ತೊಂದು ಪುರಾವೆ

ಮುಸ್ಲಿಮರು ಮಾಡದ ತಪ್ಪಿಗೆ ಬಂಧನದ ಶಿಕ್ಷೆ ಅನುಭವಿಸುತ್ತಿದ್ದಾರೆ. ಸಾಮಾಜಿಕವಾಗಿ ಘನತೆಯೂ ಮಣ್ಣುಪಾಲು. ಮಾನಸಿಕ ಹಿಂಸೆಯ ಜೊತೆಗೆ ತಮ್ಮ ಆಸ್ತಿ ಕಳೆದುಕೊಂಡಿದ್ದಾರೆ. ನೆಲಸಮಗೊಂಡ ಕಟ್ಟಡ ಇರುವ ಜಾಗ ಅಕ್ರಮ ಒತ್ತುವರಿ ಮಾಡಿಕೊಳ್ಳಲಾಗಿದೆ ಎಂಬುದು ಬುಲ್ಡೋಜರ್ ಬಾಬಾನ ಸರ್ಕಾರದ ಸಾಮಾನ್ಯ ಡೈಲಾಗ್. ಇದು ನವ ಯುಪಿ ಮಾದರಿ.

ಮೋದಿ ಭಾರತವು ಇಸ್ಲಾಮೋಫೋಬಿಯಾವನ್ನು ಸಾಂಕ್ರಾಮಿಕ ಶಿಖರಕ್ಕೆ ಏರಿಸಿದೆ. ರಾಜಕೀಯ ಲಾಭಕ್ಕಾಗಿ ಜನನಾಯಕರೆನಿಸಿಕೊಂಡವರು ಮಾಡುವ ಹುಸಿ ಭಾಷಣ, ಅಂಧಾಭಿಮಾನಿಗಳ ಮಿದುಳನ್ನು ಕೆಡಿಸಿ ಕೊಳೆಯಿಸಿಬಿಟ್ಟಿವೆ. ನ್ಯಾಯಾಲಯಗಳಿಂದ ಹೊರಬೀಳುವ ವಿಳಂಬಿತ ತೀರ್ಪುಗಳೂ ಇಸ್ಲಾಮೋಫೋಬಿಯಾದ ಕರಾಳತೆಯನ್ನು ದಟ್ಟಗೊಳಿಸಿ ಬಿಚ್ಚಿಟ್ಟಿವೆ.

ದೇಶದ್ರೋಹ ಪ್ರಕರಣ ಸೇರಿದಂತೆ ದೊಂಬಿ, ದರೋಡೆ, ಅತ್ಯಾಚಾರ, ಕಳ್ಳತನ ಪ್ರಕರಣಗಳಲ್ಲಿ ಪುರಾವೆ ಇಲ್ಲದಿದ್ದರೂ ಸಿಕ್ಕ ಸಿಕ್ಕ ಮುಸ್ಲಿಮರನ್ನು ಬಂಧಿಸಿ ವರ್ಷಗಟ್ಟಲೆ ಜೈಲಿನಲ್ಲಿಟ್ಟು, ಜಾಮೀನು ಅರ್ಜಿಯನ್ನು ಮುಂದಕ್ಕೆ ತಳ್ಳುತ್ತಾ ಕೊನೆಗೆ ದಶಕಗಳ ನಂತರ ಖುಲಾಸೆಗೊಳಿಸುವ ಪ್ರಕರಣಗಳು ಮತ್ತೆ ಮತ್ತೆ ಈ ದೇಶದ ಆತ್ಮಸಾಕ್ಷಿಗೆ ಕಳಂಕ ತರುತ್ತಿದೆ. ಈ ಕರಾಳ ಕಳಂಕಿತ ಕೃತ್ಯದ ಸರಣಿಗೆ ಇತ್ತೀಚೆಗೆ ಮತ್ತೆರಡು ಪ್ರಕರಣಗಳು ಸೇರಿವೆ.

2002ರ ಅಕ್ಷರಧಾಮ ದೇವಾಲಯದ ಮೇಲಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿಸಲ್ಪಟ್ಟ ಮೂವರು ಮುಸ್ಲಿಂ ವ್ಯಕ್ತಿಗಳನ್ನು ಕಳೆದ ವಾರ ಅಹಮದಾಬಾದ್‌ನ ವಿಶೇಷ ಭಯೋತ್ಪಾದನಾ ತಡೆ ಕಾಯ್ದೆ (ಪೋಟಾ) ನ್ಯಾಯಾಲಯವು ಖುಲಾಸೆಗೊಳಿಸಿದೆ.

2002 ಸೆಪ್ಟೆಂಬರ್ 24, ರಂದು ಅಕ್ಷರಧಾಮ ದೇವಾಲಯದ ಮೇಲೆ ದಾಳಿ ನಡೆದಾಗ ಅಹಮದಾಬಾದ್ ನಿವಾಸಿಗಳಾದ ಸುಲೇಮಾನ್ ಅಜ್ಮೀರಿ, ಮುಹಮ್ಮದ್ ಫಾರೂಕ್, ಮುಹಮ್ಮದ್ ಹಫೀಜ್ ಶೇಖ್ ಭಾರತದಲ್ಲಿ ಇರಲೇ ಇಲ್ಲ. ಅವರು ಕೊಲ್ಲಿ ರಾಷ್ಟ್ರದಲ್ಲಿ ಕೆಲಸದಲ್ಲಿದ್ದರು ಎಂದು ಹೇಳಲಾಗಿದೆ. 2019 ರಲ್ಲಿ ಅವರು ಅಹಮದಾಬಾದ್‌ಗೆ ಹಿಂದಿರುಗಿದ ನಂತರ, ಪ್ರಕರಣಕ್ಕೆ ಸಂಬಂಧಿಸಿದಂತೆ ಅವರನ್ನು ಬಂಧಿಸಲಾಗಿತ್ತು.

ನ್ಯಾಯಾಧೀಶ ಹೇಮಾಂಗ್ ಆರ್. ರಾವಲ್ ಅವರ ಅಧ್ಯಕ್ಷತೆಯಲ್ಲಿ ನಡೆದ ವಿಶೇಷ ಪೋಟಾ ನ್ಯಾಯಾಲಯವು, ಅಬ್ದುಲ್ ರಶೀದ್ ಸುಲೇಮಾನ್ ಅಜ್ಮೀರಿ, ಮುಹಮ್ಮದ್ ಫಾರೂಕ್, ಮುಹಮ್ಮದ್ ಹಫೀಜ್ ಶೇಖ್ ಮತ್ತು ಮುಹಮ್ಮದ್ ಯಾಸಿನ್ ಅಲಿಯಾಸ್ ಯಾಸಿನ್ ಭಟ್ ಅವರನ್ನು ಖುಲಾಸೆಗೊಳಿಸಿತು.

ಸುಪ್ರೀಂ ಕೋರ್ಟ್ ಈ ಹಿಂದೆ ಪ್ರಕರಣದ ಪ್ರಮುಖ ಆರೋಪಿಗಳನ್ನು ಪ್ರಾಥಮಿಕ ಸಾಕ್ಷ್ಯಾಧಾರಗಳ ಕೊರತೆಯ ಆಧಾರದ ಮೇಲೆ ಖುಲಾಸೆಗೊಳಿಸಿತ್ತು. ಖುಲಾಸೆಗೊಂಡು ಆರು ವರ್ಷದವರೆಗೆ ಬಿಡುಗಡೆಯಾಗಲು ಕಾಯಬೇಕಾದ ಈ ಪರಿಸ್ಥಿತಿಗೆ ಅವರು ಮುಸ್ಲಿಮರು ಎಂಬ ಒಂದೇ ಒಂದು ಕಾರಣ ಎಂಬುದು ಭಾರತಕ್ಕೆ ಹೆಮ್ಮೆ ತರುವ ಸಂಗತಿಯಲ್ಲ.

ಈ ಅಮಾಯಕ ಆರೋಪಿಗಳ ಪರವಾಗಿ ಜಾಮಿಯತ್ ಉಲೇಮಾ-ಎ-ಹಿಂದ್ ಸಂಘಟನೆಯು ಕಾನೂನು ಹೋರಾಟ ಮುಂದುವರಿಸಿತ್ತು.

ಇಂದು ಮತ್ತೊಂದು ಪ್ರಕರಣದಲ್ಲಿ ಮುಸ್ಲಿಂ ರಾಜಕಾರಣಿ ಖುಲಾಸೆಯಾಗಿದ್ದಾರೆ. 2024 ರಲ್ಲಿ ಅಪ್ರಾಪ್ತ ಬಾಲಕಿಯ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ ಪ್ರಕರಣದಲ್ಲಿ ಸಮಾಜವಾದಿ ಪಕ್ಷದ ನಾಯಕ ಮೊಯಿದ್ ಖಾನ್ ಅವರನ್ನು ಆರೋಪಿಯನ್ನಾಗಿ ಮಾಡಲಾಗಿತ್ತು. ಉತ್ತರ ಪ್ರದೇಶದ ಅಯೋಧ್ಯೆಯ ಪೋಕ್ಸೋ ನ್ಯಾಯಾಲಯವು ಇದೀಗ ಅವರನ್ನು ಖುಲಾಸೆಗೊಳಿಸಿದೆ.

ಡಿಎನ್‌ಎ ಪರೀಕ್ಷೆಯಲ್ಲಿ ಅವರು ವಿರುದ್ಧ ಆರೋಪಕ್ಕೆ ಯಾವುದೇ ಸಾಕ್ಷ್ಯಾಧಾರ ಸಿಕ್ಕಿಲ್ಲ ಎಂದು ಕೋರ್ಟ್ ಹೇಳಿದೆ. ಆದರೆ, ಪ್ರಕರಣ ನಡೆದ ಬಳಿಕ ಯೋಗಿ ಸರ್ಕಾರದ ಬುಲ್ಡೋಜರ್ ಮೊಯಿನ್ ಖಾನ್ ಅವರಿಗೆ ಸೇರಿದ್ದ ಬೇಕರಿ, ವಾಣಿಜ್ಯ ಕಟ್ಟಡವನ್ನು ನೆಲಸಮ ಮಾಡಿತ್ತು. ಬೇಕರಿಯ ನೌಕರ ಅತ್ಯಾಚಾರ ಪ್ರಕರಣ ದೋಷಿಯಾಗಿದ್ದಾನೆ. ಆದರೆ ಮೊಯಿನ್ ಅವರನ್ನು ಈ ಪ್ರಕರಣದಲ್ಲಿ ಉದ್ದೇಶಪೂರ್ವಕವಾಗಿ ಸಿಲುಕಿಸಲಾಗಿತ್ತು. ಅಯೋಧ್ಯೆಯಲ್ಲಿಯೇ ಬಿಜೆಪಿಗೆ ಮಣ್ಣು ಮುಕ್ಕಿಸಿದ ಸಮಾಜವಾದಿ ಪಕ್ಷದ ಅವಧೇಶ್ ಪ್ರಸಾದ್ ಅವರ ಆಪ್ತ ಮೊಯಿನ್ ಖಾನ್ ಎಂಬುದನ್ನು ಗಮನಿಸಬೇಕು. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಇದನ್ನು ರಾಜಕೀಕರಣಗೊಳಿಸಿದ್ದು ನೀಚತನ. ಅತ್ಯಾಚಾರ ಸಂತ್ರಸ್ತೆಯ ಕುಟುಂಬವನ್ನು ಭೇಟಿ ಮಾಡಿದ್ದ ಯೋಗಿ, ತಕ್ಕ ಶಿಕ್ಷೆ ಕೊಡಿಸುವುದಾಗಿ ಭರವಸೆ ನೀಡಿದ ಎರಡು ದಿನದಲ್ಲಿ ಬುಲ್ಡೋಜರ್ ಪ್ರತಾಪ ತೋರಿದ್ದರು. ಈಗ ಮೊಯಿನ್ ಖುಲಾಸೆಗೊಂಡಿದ್ದಾರೆ. ಈಗ ಯೋಗಿ ಸರ್ಕಾರದ ಬಳಿ ಉತ್ತರವಿದೆಯೇ?

ಮಾಡದ ತಪ್ಪಿಗೆ ಬಂಧನದ ಶಿಕ್ಷೆ, ಸಾಮಾಜಿಕವಾಗಿ ಘನತೆಯೂ ಮಣ್ಣುಪಾಲು. ಮಾನಸಿಕ ಹಿಂಸೆಯ ಜೊತೆಗೆ ತಮ್ಮ ಆಸ್ತಿ ಕಳೆದುಕೊಂಡಿದ್ದಾರೆ. ನೆಲಸಮಗೊಂಡ ಕಟ್ಟಡ ಇರುವ ಜಾಗ ಅಕ್ರಮ ಒತ್ತುವರಿ ಮಾಡಿಕೊಳ್ಳಲಾಗಿದೆ ಎಂದು ಯೋಗಿ ಸರ್ಕಾರ ಹೇಳಿದೆ. ಇದು ಬುಲ್ಡೋಜರ್ ಬಾಬಾನ ಸರ್ಕಾರದ ಸಾಮಾನ್ಯ ಡೈಲಾಗ್. ಮುಸ್ಲಿಂ ಆರೋಪಿಗಳ ಮನೆ, ಕಟ್ಟಡ ನೆಲಸಮ ಮಾಡಿ ನಂತರ ಒತ್ತುವರಿ ತೆರವು ಎಂದು ಹೇಳುವುದು ಇದು ನವ ಯುಪಿ ಮಾದರಿ.

ಬಿಜೆಪಿ ಮತ್ತು ಸಂಘಪರಿವಾರದ ಮುಸ್ಲಿಂ ದ್ವೇಷ ಈ ದೇಶದ ಏಕತೆ ಮತ್ತು ಸೌಹಾರ್ದ ಪರಂಪರೆಗೆ ಮಾರಕವಷ್ಟೇ ಅಲ್ಲ, ವಿಶ್ವದ ಮಟ್ಟದಲ್ಲಿ ಭಾರತದ ಗೌರವವನ್ನು ಹಾಳು ಮಾಡುತ್ತದೆ. ಚುನಾವಣಾ ಪ್ರಚಾರದ ಸಮಯದಲ್ಲಿ ಸ್ವತಃ ಮೋದಿಯವರು ಮುಸ್ಲಿಮರ ಮೇಲೆ ತನ್ನ ಹೃದಯದಲ್ಲಿದ್ದ ವಿಷವನ್ನು ಬಹಿರಂಗವಾಗಿ ಕಾರಿಕೊಂಡಿದ್ದರು. ಮೊನ್ನೆಯಷ್ಟೇ ಮೋದಿ ಸರ್ಕಾರದ ಮಂತ್ರಿ ಅನುರಾಗ್ ಠಾಕೂರ್ ''ಮುಸ್ಲಿಮರು ಭಾರತದಲ್ಲಿ ಉಳಿಯಬೇಕಿದ್ದರೆ ವಂದೇ ಮಾತರಂ ಹಾಡಬೇಕು'' ಎಂದು ಹೇಳಿದ್ದಾರೆ. ಹಿಂದೂರಾಷ್ಟ್ರ ಮಾಡುವ ಆರೆಸ್ಸೆಸ್, ಹಿಂದುತ್ವವಾದಿ ಸಂಘಟನೆಗಳ ಕೋಮುವಾದಿ ಅಜೆಂಡಾ ಹೀಗೆ ಮುಸ್ಲಿಂ ದ್ವೇಷದ ಮೂಲಕ ಹೊರಬರುತ್ತಿದೆ. ಮುಸ್ಲಿಮರನ್ನು ಗೋಮಾಂಸ ಮಾರುತ್ತಾರೆ, ಗೋಕಳ್ಳತನ ಮಾಡ್ತಾರೆ ಎಂದು ಜಜ್ಜಿ ಕೊಲ್ಲುವುದು, ಗಲಭೆ ನಡೆದರೆ ಸಾಮೂಹಿಕವಾಗಿ ಮುಸ್ಲಿಂ ಯುವಕರನ್ನು ಬಂಧಿಸುವುದು, ಕಲ್ಲು ಹೊಡೆಯುವವರು, ಬಾಂಬ್ ಇಡುವವರು ಎಂಬ ಹಣೆಪಟ್ಟಿ ಕಟ್ಟಿ ಹೀನಾಯವಾಗಿ ಅವಮಾನಿಸುವುದು ಈ ಹತ್ತು ವರ್ಷಗಳಲ್ಲಿ ವಿಪರೀತವಾಗಿ ಹೆಚ್ಚಾಗಿದೆ.

ಮೋದಿಯವರು ಅತ್ತ ಮುಸ್ಲಿಂ ರಾಷ್ಟ್ರಗಳಿಗೆ ಭೇಟಿ ನೀಡಿ ಅಲ್ಲಿ ತನ್ನ ಆಪ್ತ ಸ್ನೇಹಿತ ಅದಾನಿಗೆ ಉದ್ಯಮ ವಿಸ್ತರಣೆಗೆ ನೆರವಾಗಿವುದು, ಮುಸ್ಲಿಂ ಮುಖಂಡರನ್ನು ಬಾಚಿ ತಬ್ಬಿಕೊಳ್ಳುವುದು, ಮುಸ್ಲಿಮರು ಮತ್ತು ತಾನು ಭಾಯಿ ಭಾಯಿ, ಜನ್ಮ ಜನ್ಮಾಂತರದ ಸಂಬಂಧ ಎಂದು ಬೊಗಳೆ ಬಿಡುವುದು; ಇತ್ತ ದೇಶದ ಪ್ರಜೆಗಳಾದ ಮುಸ್ಲಿಮರ ಮೇಲೆ ಬುಲ್ಡೋಜರ್ ಹರಿಸುವುದು, ದೇಶದ್ರೋಹದ ಕಾನೂನಿನಡಿ ಅವರ ಧ್ವನಿ ಹತ್ತಿಕ್ಕುವುದು. ಇದು ಮೋದಿಯವರ ಗೋಸುಂಬೆತನ ತೋರಿಸುತ್ತದೆ. ಅಪರಾಧವನ್ನೇ ಎಸಗದ ಅಮಾಯಕರ ಮೇಲೆ ಸುಳ್ಳು ಪ್ರಕರಣ ದಾಖಲಿಸಿ ಅವರ ಬದುಕನ್ನೇ ನಾಶಪಡಿಸುವ ಸರ್ಕಾರಗಳಿಗೆ ನ್ಯಾಯಾಲಯವೇ ತಕ್ಕ ಪಾಠ ಕಲಿಸಬೇಕಿದೆ.

ಜೈಲಿನಲ್ಲಿ ಹದಗೆಟ್ಟ ಆರೋಗ್ಯ: ಸೋನಮ್ ವಾಂಗ್‌ಚುಕ್ ಜೋಧಪುರದ ಏಮ್ಸ್‌ಗೆ ದಾಖಲು

ರಾಷ್ಟ್ರೀಯ ಭದ್ರತಾ ಕಾಯ್ದೆ () ಅಡಿಯಲ್ಲಿ ಬಂಧನಕ್ಕೆ ಒಳಗಾಗಿ ಸದ್ಯ ಜೋಧಪುರ ಜೈಲಿನಲ್ಲಿರುವ ಶೈಕ್ಷಣಿಕ ಸುಧಾರಕ, ಪರಿಸರವಾದಿ, ಲಡಾಖ್ ಹೋರಾಟಗಾರ ಸೋನಮ್ ವಾಂಗ್‌ಚುಕ್ ಆರೋಗ್ಯ ಸ್ಥಿತಿ ಹದಗೆಟ್ಟಿದ್ದು, ಜೋಧಪುರದ ಏಮ್ಸ್ ಗೆ ದಾಖಲಿಸಲಾಗಿದೆ.

ಜನವರಿ 31ರ ಶನಿವಾರ ಬೆಳಿಗ್ಗೆ 6.30 ಗಂಟೆ ಸುಮಾರಿಗೆ ಪೊಲೀಸರು ಜೋಧಪುರ ಕೇಂದ್ರ ಕಾರಾಗೃಹದಿಂದ ಏಮ್ಸ್ ನ ತುರ್ತು ವಿಭಾಗಕ್ಕೆ ವಾಂಗ್‌ಚುಕ್ ಅವರನ್ನು ಸ್ಥಳಾಂತರಿಸಿದ್ದಾರೆ. ಸುಮಾರು ಒಂದೂವರೆ ಗಂಟೆಗಳ ಕಾಲ ವಾಂಗ್‌ಚುಕ್ ವೈದ್ಯಕೀಯ ಪರೀಕ್ಷೆ ನಡೆಸಲಾಗಿದೆ. ಹಾಗೆಯೇ ಜೀರ್ಣಾಂಗ ವ್ಯವಸ್ಥೆ ಮತ್ತು ಯಕೃತ್ತಿಗೆ ಸಂಬಂಧಿಸಿದ ಕಾಯಿಲೆಗಳ ಪತ್ತೆ ಹಚ್ಚಲು ಗ್ಯಾಸ್ಟ್ರೋಎಂಟರಾಲಜಿಸ್ಟ್ ಪರೀಕ್ಷೆ ನಡೆಸಿದ್ದಾರೆ ಎಂದು ವರದಿಯಾಗಿದೆ.

ವಾಂಗ್‌ಚುಕ್ ಉದರ ಸಂಬಂಧ ಕಾಯಿಲೆಗಳಿಂದ ಬಳಲುತ್ತಿದ್ದು, ದೇಹದ ಹಲವು ಭಾಗಗಳಲ್ಲಿ ನೋವು ಹೊಂದಿದ್ದಾರೆ. ನಿನ್ನೆಯೂ ಅವರನ್ನೂ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗಿತ್ತು. ಇನ್ನು ಇಂದು ಪರೀಕ್ಷೆಯ ನಂತರ ಬಿಗಿ ಭದ್ರತೆಯೊಂದಿಗೆ ಜೋಧಪುರ ಕೇಂದ್ರ ಕಾರಾಗೃಹಕ್ಕೆ ವಾಪಸ್ ಕರೆತರಲಾಗಿದೆ.

ಇನ್ನು ವಾಂಗ್‌ಚುಕ್ ಆರೋಗ್ಯದ ಬಗ್ಗೆ ಅವರ ಪತ್ನಿ ಗೀತಾಂಜಲಿ ಜೆ ಆಂಗ್ಮೋ ಕಳವಳ ವ್ಯಕ್ತಪಡಿಸಿದ್ದರು. ವಾಂಗ್‌ಚುಕ್ ಆರೋಗ್ಯ ಹದಗೆಡುತ್ತಿದೆ ಎಂದು ಉಲ್ಲೇಖಿಸಿ ಹಿರಿಯ ವಕೀಲ ಕಪಿಲ್ ಸಿಬಲ್ ಮೂಲಕ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು. ಗುರುವಾರ ಈ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಮತ್ತು ಪಿ.ಬಿ. ವರಾಲೆ ಅವರನ್ನೊಳಗೊಂಡ ಪೀಠವು, ವಾಂಗ್‌ಚುಕ್ ಅವರನ್ನು ಸರ್ಕಾರಿ ಆಸ್ಪತ್ರೆಯ ತಜ್ಞ ವೈದ್ಯರಿಂದ ಪರೀಕ್ಷಿಸುವಂತೆ ಜೈಲಿನ ಅಧಿಕಾರಿಗಳಿಗೆ ನಿರ್ದೇಶಿಸಿದ್ದರು.

ಜೈಲಿನಲ್ಲಿ ಒದಗಿಸಲಾದ ಕುಡಿಯುವ ನೀರಿನ ಗುಣಮಟ್ಟದ ಸಮಸ್ಯೆಯಿಂದಾಗಿ ವಾಂಗ್‌ಚುಕ್ ಹೊಟ್ಟೆಯ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಪದೇ ಪದೇ ಈ ಬಗ್ಗೆ ತಿಳಿಸಿದ್ದರೂ, ಅವರಿಗೆ ಚಿಕಿತ್ಸೆ ನೀಡಿಲ್ಲ ಎಂದು ಸಿಬಲ್ ದೂರಿದ್ದಾರೆ. ಹಾಗೆಯೇ ವಾಂಗ್‌ಚುಕ್‌ಗೆ ವಾರಕ್ಕೊಮ್ಮೆ ವೈದ್ಯಕೀಯ ತಪಾಸಣೆ ನಡೆಸಬೇಕು. ಶುದ್ಧ ಕುಡಿಯುವ ನೀರನ್ನು ಕುಟುಂಬವೇ ಕಳುಹಿಸಲು ಅನುಮತಿ ನೀಡಬೇಕು ಎಂದೂ ಒತ್ತಾಯಿಸಿದ್ದಾರೆ. ಈ ನಿಟ್ಟಿನಲ್ಲಿ ಫೆಬ್ರವರಿ 2ರ ಒಳಗಾಗಿ ವಾಂಗ್‌ಚುಕ್ ಅವರ ವೈದ್ಯಕೀಯ ವರದಿಯನ್ನು ಸಲ್ಲಿಸುವಂತೆ ಸುಪ್ರೀಂ ಕೋರ್ಟ್ ಅಧಿಕಾರಿಗಳಿಗೆ ಸೂಚಿಸಿದೆ.

ಇನ್ನು ರಾಜಸ್ಥಾನ ಸರ್ಕಾರದ ಪರವಾಗಿ ಹಾಜರಾದ ಹೆಚ್ಚುವರಿ ಸಾಲಿಸಿಟರ್ ಜನರಲ್ ಕೆ.ಎಂ. ನಟರಾಜ್, ವಾಂಗ್‌ಚುಕ್ ಅವರಿಗೆ ನಿಯಮಿತ ವೈದ್ಯಕೀಯ ಚಿಕಿತ್ಸೆ ನೀಡಲಾಗುತ್ತಿದೆ. ಕಳೆದ ನಾಲ್ಕು ತಿಂಗಳುಗಳಲ್ಲಿ ಜೈಲು ವೈದ್ಯರು 21 ಬಾರಿ ಅವರನ್ನು ಪರೀಕ್ಷಿಸಿದ್ದಾರೆ ಎಂದು ಹೇಳಿಕೊಂಡಿದ್ದಾರೆ.

ದಲಿತ ನಾಯಕಿ ದಲಿತರಿಗೇ ವಿರುದ್ಧವಾಗಿ ವರ್ತಿಸುತ್ತಿರುವುದೇಕೆ?



ಹೊಸ ನಿಯಮಗಳಿಗೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿರುವುದನ್ನು ಬಹುಜನ ಸಮಾಜ ಪಕ್ಷದ ನಾಯಕಿ ಮಾಯಾವತಿ ಸ್ವಾಗತಿಸಿದ್ದಾರೆ. ಮಾಯಾವತಿಯವರ ಈ ನಡೆಯನ್ನು ಹಲವರು ವಿರೋಧಿಸಿದ್ದಾರೆ.

ಭಾರತೀಯ ಶಿಕ್ಷಣ ವ್ಯವಸ್ಥೆಯಲ್ಲಿ ಜಾತಿ ತಾರತಮ್ಯ ಎಂಬುದು ಅನೇಕ ದಶಕಗಳಿಂದ ಬೇರೂರಿರುವ ಗಂಭೀರ ಸಾಮಾಜಿಕ ಸಮಸ್ಯೆ. ಪ್ರಾಥಮಿಕ ಶಿಕ್ಷಣದಿಂದ ಹಿಡಿದು ಉನ್ನತ ಅಧ್ಯಯನ ಸಂಸ್ಥೆಗಳವರೆಗೆ ಜಾತಿ ಆಧಾರಿತ ತಾರತಮ್ಯದ ಪರಿಣಾಮಗಳು ವಿಭಿನ್ನ ರೂಪಗಳಲ್ಲಿ ಕಾಣಿಸಿಕೊಳ್ಳುತ್ತಿವೆ. ಪ್ರವೇಶ ಪ್ರಕ್ರಿಯೆ, ವಿದ್ಯಾರ್ಥಿವೇತನ ವಿತರಣೆ, ವಸತಿ ಸೌಲಭ್ಯಗಳು, ಮೌಲ್ಯಮಾಪನ ವ್ಯವಸ್ಥೆ ಹಾಗೂ ಅಧ್ಯಾಪಕರ ನಡವಳಿಕೆಗಳಲ್ಲಿ ಸಹ ಜಾತಿಯ ಪ್ರಭಾವ ಇದೆ ಎಂಬ ಆರೋಪಗಳು ಪದೇಪದೇ ಕೇಳಿಬರುತ್ತಿವೆ.

ವಿಶೇಷವಾಗಿ ದಲಿತ, ಆದಿವಾಸಿ ವಿದ್ಯಾರ್ಥಿಗಳು ಕ್ಯಾಂಪಸ್‌ಗಳಲ್ಲಿ ಸಾಮಾಜಿಕ ಒಂಟಿತನ, ಮಾನಸಿಕ ಒತ್ತಡ ಮತ್ತು ಅವಮಾನಕಾರಿ ವರ್ತನೆಗಳನ್ನು ಅನುಭವಿಸುತ್ತಿರುವ ಬಗ್ಗೆ ಹಲವಾರು ವರದಿಗಳು ಬೆಳಕಿಗೆ ಬಂದಿವೆ. ಕೆಲ ಪ್ರಕರಣಗಳಲ್ಲಿ ಇವು ಆತ್ಮಹತ್ಯೆಗೂ ಕಾರಣವಾಗಿರುವುದು ದೇಶದ ಆತ್ಮಸಾಕ್ಷಿಗೆ ದೊಡ್ಡ ಆಘಾತವಾಗಿದೆ.

ವಿಶ್ವವಿದ್ಯಾಲಯಗಳಲ್ಲಿ ಜಾತಿ ಆಧಾರಿತ ತಾರತಮ್ಯ, ದೌರ್ಜನ್ಯಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿವೆ. ವಿಶ್ವವಿದ್ಯಾಲಯಗಳಲ್ಲಿನ ಜಾತಿ ತಾರತಮ್ಯಕ್ಕೆ ರೋಹಿತ್ ವೇಮುಲಾ ಸೇರಿದಂತೆ ಹಲವರು ಬಲಿಯಾಗಿದ್ದಾರೆ. ವೇಮುಲಾ ಸಾವಿನ ಪ್ರಕರಣವು ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದು, ವಿಶ್ವವಿದ್ಯಾಲಯಗಳಲ್ಲಿನ ಜಾತಿ ದಬ್ಬಾಳಿಕೆಗಳ ಕುರಿತು ಸುಪ್ರೀಂ ಕೋರ್ಟ್ ಕೂಡ ಕಳವಳ ವ್ಯಕ್ತಪಡಿಸಿತ್ತು. ಶಿಕ್ಷಣ ಸಂಸ್ಥೆಗಳ ಕ್ಯಾಂಪಸ್‌ನಲ್ಲಿ ಜಾತಿ ತಾರತಮ್ಯಗಳನ್ನು ತಡೆಯಲು ನಿಯಮಗಳನ್ನು ರೂಪಿಸುವಂತೆ ಯುಜಿಸಿಗೆ ತಾಕೀತು ಮಾಡಿತ್ತು. ಅದರಂತೆ, ಯುಜಿಸಿ ನಿಯಮಗಳನ್ನು ರೂಪಿಸಿತ್ತು. ಇದೀಗ, ಆ ನಿಮಯುಗಳ ಸುತ್ತ ಕೆಲವು ಸಮುದಾಯಗಳು ವಿವಾದ ಸೃಷ್ಟಿಸಿವೆ.

ವಿಶ್ವದ್ಯಾಲಯಗಳು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಜಾತಿ ತಾರತಮ್ಯವನ್ನು ತಡೆಯಲು ವಿಶ್ವವಿದ್ಯಾಲಯ ಅನುದಾನ ಆಯೋಗ (ಯುಜಿಸಿ) ರೂಪಿಸಿರುವ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಅಧಿಸೂಚಿತ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಸಮಾನತೆಯ ಪ್ರಚಾರ ನಿಯಮಗಳು-2026 ರೂಪಿಸಿದೆ. ಈ ಹೊಸ ನಿಯಮಗಳ ಜಾರಿಗೆ ಸಂಬಂಧಿಸಿದಂತೆ ದೇಶಾದ್ಯಂತ ಭಿನ್ನಾಭಿಪ್ರಾಯಗಳು ವ್ಯಕ್ತವಾಗುತ್ತಿವೆ. ಒಂದು ವರ್ಗ ಈ ನಿಯಮಗಳು ಅಗತ್ಯವೆಂದು ಹೇಳುತ್ತಿದ್ದರೆ, ಮತ್ತೊಂದು ವರ್ಗ ಈ ನಿಯಮವನ್ನು ವಿರೋಧ ಮಾಡುತ್ತಿವೆ.

ಯುಜಿಸಿ ಸಿದ್ದಪಡಿಸಿರುವ ಹೊಸ ನಿಯಮಗಳು ಸಾಮಾನ್ಯ ವರ್ಗಗಳ ವಿರುದ್ಧ ತಾರತಮ್ಯಕ್ಕೆ ಆಸ್ಪದ ನೀಡುತ್ತವೆ ಎಂದು ಆಕ್ಷೇಪಿಸಿ ಹಲವರು ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿಯನ್ನೂ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರಿದ್ದ ಪೀಠ ವಿಚಾರಣೆ ನಡೆಸಿದೆ. ಯುಜಿಸಿ ರೂಪಿಸಿದ್ದ ಹೊಸ ನಿಯಮಗಳಿಗೆ ತಡೆಯೊಡ್ಡಿದೆ. ಹೊಸ ನಿಯಮಗಳಿಗೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿರುವುದನ್ನು ಬಹುಜನ ಸಮಾಜ ಪಕ್ಷದ ನಾಯಕಿ ಮಾಯಾವತಿ ಸ್ವಾಗತಿಸಿದ್ದಾರೆ. ಮಾಯಾವತಿ ಈ ನಡೆಯನ್ನ ಹಲವರು ವಿರೋಧಿಸಿದ್ದಾರೆ.

ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಬಹುಜನ ಸಮಾಜ ಪಕ್ಷದ ನಾಯಕಿ ಮಾಯಾವತಿ, ''ದೇಶದಾದ್ಯಂತ ಸರ್ಕಾರಿ ಮತ್ತು ಖಾಸಗಿ ವಿಶ್ವವಿದ್ಯಾಲಯಗಳಲ್ಲಿ ಜಾತಿ ಆಧಾರಿತ ಘಟನೆಗಳನ್ನು ತಡೆಗಟ್ಟಲು ವಿಶ್ವವಿದ್ಯಾಲಯ ಅನುದಾನ ಆಯೋಗ (ಯುಜಿಸಿ) ಜಾರಿಗೆ ತಂದಿರುವ ಹೊಸ ನಿಯಮಗಳು ಸಮಾಜದಲ್ಲಿ ಉದ್ವಿಗ್ನತೆಯ ವಾತಾವರಣವನ್ನು ಸೃಷ್ಟಿ ಮಾಡುತ್ತಿವೆ. ಈ ಪ್ರಸ್ತುತ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಸುಪ್ರೀಂ ಕೋರ್ಟ್ ಹೊಸ ಯುಜಿಸಿ ನಿಯಮವನ್ನು ನಿಷೇಧಿಸಿರುವ ನಿರ್ಧಾರ ಸೂಕ್ತವಾಗಿದೆ'' ಎಂದು ಹೇಳಿದ್ದಾರೆ.

ಮಾಯಾವತಿ ಅವರ ಈ ಹೇಳಿಕೆ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ. ಹಲವರು ಅವರ ಅಭಿಪ್ರಾಯಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಜಾತಿತಾರತಮ್ಯ ವಿರೋಧಿ ನಿಯಮಗಳ ಬಗ್ಗೆ ಈ ರೀತಿಯ ಹೇಳಿಕೆಗಳು ತಳಸಮುದಾಯಗಳ ಹೋರಾಟವನ್ನು ದುರ್ಬಲಗೊಳಿಸುತ್ತವೆ ಎಂದು ಟೀಕಿಸಿದ್ದಾರೆ. ಇನ್ನು ಕೆಲವರು, ಸಮಾಜದ ಸಮತೋಲನ ಕಾಪಾಡುವ ದೃಷ್ಟಿಯಿಂದ ಎಲ್ಲ ವರ್ಗಗಳನ್ನೂ ಒಳಗೊಂಡು ನೀತಿ ರೂಪಿಸುವ ಅಗತ್ಯವಿದೆ ಎಂಬ ಮಾಯಾವತಿ ಅವರ ಅಭಿಪ್ರಾಯಕ್ಕೆ ಬೆಂಬಲ ಸೂಚಿಸಿದ್ದಾರೆ.

ಒಟ್ಟಾರೆ, ಯುಜಿಸಿ ನಿಯಮಗಳು, ಸುಪ್ರೀಂ ಕೋರ್ಟ್ ತೀರ್ಪು ಹಾಗೂ ಮಾಯಾವತಿ ಅವರ ಪ್ರತಿಕ್ರಿಯೆಗಳು ಇದೀಗ ರಾಜಕೀಯ ಮತ್ತು ಸಾಮಾಜಿಕ ವಲಯಗಳಲ್ಲಿ ಹೊಸ ಚರ್ಚೆಗೆ ಕಾರಣವಾಗಿವೆ. ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರ ಮತ್ತು ಯುಜಿಸಿ ಯಾವ ರೀತಿಯ ನಿಲುವು ತಾಳಲಿವೆ ಎಂಬುದರತ್ತ ಎಲ್ಲರ ದೃಷ್ಟಿ ನೆಟ್ಟಿದೆ.

ನ್ಯಾಯದ ಹೆಸರಲ್ಲಿ ಮುಸ್ಲಿಮರಿಗೆ ನಿರಂತರ ಅನ್ಯಾಯ ಸರಿಯೇ?

ಭಾರತದ ನ್ಯಾಯ ವ್ಯವಸ್ಥೆಯಲ್ಲಿ, ವಿಶೇಷವಾಗಿ ಭಯೋತ್ಪಾದನೆ ಸಂಬಂಧಿತ ಪ್ರಕರಣಗಳಲ್ಲಿ, ಮುಸ್ಲಿಂ ಸಮುದಾಯದ ವ್ಯಕ್ತಿಗಳನ್ನು ಆರೋಪಿಗಳನ್ನಾಗಿ ಮಾಡಿ ದೀರ್ಘಕಾಲ ಬಂಧನದಲ್ಲಿ ಇರಿಸಿ ನಂತರ ಖುಲಾಸೆಗೊಳಿಸುವ ಪ್ರಕರಣಗಳು ಹೆಚ್ಚುತ್ತಿವೆ. ಅಕ್ಷರಧಾಮ ದೇವಾಲಯ ದಾಳಿ ಪ್ರಕರಣದಲ್ಲಿ ಮೂವರು ಮುಸ್ಲಿಮರ ಖುಲಾಸೆ, ಯುಪಿಯ ಸಮಾಜವಾದಿ ಪಕ್ಷದ ಮುಖಂಡ ಮೊಯಿದ್ ಖಾನ್ ಖುಲಾಸೆ ಇದಕ್ಕೆ ಇತ್ತೀಚಿನ ಉದಾಹರಣೆಯಾಗಿದೆ.

2002ರ ಸೆಪ್ಟೆಂಬರ್ 24ರಂದು ಗುಜರಾತ್‌ನ ಅಹಮದಾಬಾದ್‌ನ ಅಕ್ಷರಧಾಮ ದೇವಾಲಯದ ಮೇಲೆ ನಡೆದ ದಾಳಿಯಲ್ಲಿ 33 ಜನರು ಸಾವನ್ನಪ್ಪಿದ್ದರು ಮತ್ತು 86 ಜನರು ಗಾಯಗೊಂಡಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿಸಲ್ಪಟ್ಟ ಮೂವರು ಮುಸ್ಲಿಂಮರಾದ ಅಬ್ದುಲ್ ರಶೀದ್ ಸುಲೇಮಾನ್ ಅಜ್ಮೀರಿ, ಮುಹಮ್ಮದ್ ಫಾರೂಕ್ ಮುಹಮ್ಮದ್ ಹಫೀಜ್ ಶೇಖ್ ಮತ್ತು ಮುಹಮ್ಮದ್ ಯಾಸಿನ್ ಅವರನ್ನು ಕಳೆದ ವಾರ ಅಹಮದಾಬಾದ್‌ನ ವಿಶೇಷ ಭಯೋತ್ಪಾದನಾ ತಡೆ ಕಾಯ್ದೆ (ಪೋಟಾ) ನ್ಯಾಯಾಲಯವು ಖುಲಾಸೆಗೊಳಿಸಿದೆ.

ದಾಳಿ ಸಂದರ್ಭದಲ್ಲಿ ಅಹಮದಾಬಾದ್ ನಿವಾಸಿಗಳಾದ ಸುಲೇಮಾನ್ ಅಜ್ಮೀರಿ ಮತ್ತು ಮುಹಮ್ಮದ್ ಫಾರೂಕ್ ಮುಹಮ್ಮದ್ ಹಫೀಜ್ ಶೇಖ್ ಭಾರತದಲ್ಲಿ ಇರಲಿಲ್ಲ ಮತ್ತು ಸೌದಿ ಅರೇಬಿಯಾದಲ್ಲಿ ಕೆಲಸ ಮಾಡುತ್ತಿದ್ದರು. ಇನ್ನು ಖುಲಾಸೆಗೊಂಡವರಿಗೆ ನ್ಯಾಯ ಸಿಗಲು ಆರು ವರ್ಷಗಳು ಬೇಕಾಯಿತು ಎಂದು ಮದನಿ ತೀವ್ರ ವಿಷಾದ ವ್ಯಕ್ತಪಡಿಸಿದರು.

ಈ ಪ್ರಕರಣದಲ್ಲಿ ಬಂಧಿಸಲ್ಪಟ್ಟ ಇತರ ಮೂವರು ವ್ಯಕ್ತಿಗಳನ್ನು ಈ ಹಿಂದೆಯೇ ಖುಲಾಸೆಗೊಳಿಸಿದೆ. ಈ ಖುಲಾಸೆಯು ವಿಧ್ವಂಸಕ ಪ್ರಕರಣಗಳಲ್ಲಿ ಮುಸ್ಲಿಮರನ್ನು ಆರೋಪಿಯನ್ನಾಗಿಸಿ ದಶಕದ ನಂತರ ಖುಲಾಸೆಗೊಳಿಸುತ್ತಿರುವ ಪ್ರಕರಣಗಳಿಗೆ ಮತ್ತೊಂದು ಸೇರ್ಪಡೆಯಾಗಿದೆ.

2024 ರಲ್ಲಿ ಅಪ್ರಾಪ್ತ ಬಾಲಕಿಯ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ ಪ್ರಕರಣದಲ್ಲಿ ಸಮಾಜವಾದಿ ಪಕ್ಷದ ನಾಯಕ ಮೊಯಿದ್ ಖಾನ್ ಅವರನ್ನು ಆರೋಪಿಯನ್ನಾಗಿ ಮಾಡಲಾಗಿತ್ತು. ಉತ್ತರ ಪ್ರದೇಶದ ಅಯೋಧ್ಯೆಯ ಪೋಕ್ಸೋ ನ್ಯಾಯಾಲಯವು ಇದೀಗ ಅವರನ್ನು ಖುಲಾಸೆಗೊಳಿಸಿದೆ.

ಡಿಎನ್‌ಎ ಪರೀಕ್ಷೆಯಲ್ಲಿ ಅವರು ವಿರುದ್ಧ ಆರೋಪಕ್ಕೆ ಯಾವುದೇ ಸಾಕ್ಷ್ಯಾಧಾರ ಸಿಕ್ಕಿಲ್ಲ ಎಂದು ಕೋರ್ಟ್ ಹೇಳಿದೆ. ಆದರೆ, ಪ್ರಕರಣ ನಡೆದ ಬಳಿಕೆ ಯೋಗಿ ಸರ್ಕಾರದ ಬುಲ್ಡೋಜರ್ ಮೊಯಿನ್ ಖಾನ್ ಅವರಿಗೆ ಸೇರಿದ್ದ ಬೇಕರಿ, ವಾಣಿಜ್ಯ ಕಟ್ಟಡವನ್ನು ನೆಲಸಮ ಮಾಡಿತ್ತು. ಬೇಕರಿಯ ನೌಕರ ಅತ್ಯಾಚಾರ ಪ್ರಕರಣ ದೋಷಿಯಾಗಿದ್ದಾನೆ. ಆದರೆ ಮೊಯಿನ್ ಅವರನ್ನು ಈ ಪ್ರಕರಣದಲ್ಲಿ ಉದ್ದೇಶಪೂರ್ವಕವಾಗಿ ಸಿಲುಕಿಸಲಾಗಿತ್ತು. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಇದನ್ನು ರಾಜಕೀಕರಣಗೊಳಿಸಿದ್ದರು. ಅತ್ಯಾಚಾರ ಸಂತ್ರಸ್ತೆಯ ಕುಟುಂಬವನ್ನು ಭೇಟಿ ಮಾಡಿದ್ದ ಯೋಗಿ, ತಕ್ಕ ಶಿಕ್ಷೆ ಕೊಡಿಸುವುದಾಗಿ ಭರವಸೆ ನೀಡಿದ ಎರಡು ದಿನದಲ್ಲಿ ಮೊಯಿನ್ ಖಾನ್ ಗೆ ಸೇರಿದ್ದ ಕಟ್ಟಡವನ್ನು ನೆಲಸಮ ಮಾಡಲಾಗಿತ್ತು. ಇದೀಗ ಖಾನ್ ಖುಲಾಸೆಗೊಂಡಿದ್ದಾರೆ. ಈಗ ಯೋಗಿ ಸರ್ಕಾರದ ಅಪರಾಧಕ್ಕೆ ಯಾವ ಶಿಕ್ಷೆಯಿದೆ?

ಭಾರತದ ನ್ಯಾಯಾಂಗ ಇತಿಹಾಸದಲ್ಲಿ ಪದೇ ಪದೇ ಕಾಣಿಸಿಕೊಳ್ಳುತ್ತಿರುವ ಒಂದು ಭಯಾನಕ ಮಾದರಿ ಇದೇ. ಭಯೋತ್ಪಾದನಾ ದಾಳಿಗಳಾದ ತಕ್ಷಣ, ಕೆಲವು ನಿರ್ದಿಷ್ಟ ಹೆಸರುಗಳು, ನಿರ್ದಿಷ್ಟ ಧರ್ಮದ ಯುವಕರು ಆರೋಪಿಗಳಾಗುತ್ತಾರೆ. ವರ್ಷಗಳ ಕಾಲ ಕಾರಾಗೃಹ, ಹಿಂಸೆ, ಸಾಮಾಜಿಕ ಬಹಿಷ್ಕಾರ, ಕುಟುಂಬಗಳ ಕಣ್ಣೀರು ಅಂತಿಮವಾಗಿ ದಶಕಗಳ ನಂತರ ನ್ಯಾಯಾಲಯದಿಂದ ಒಂದೇ ಸಾಲಿನ ತೀರ್ಪು ಹೊರ ಬರತ್ತೆ.''ಪುರಾವೆಗಳ ಕೊರತೆಯಿಂದ ಖುಲಾಸೆ.'' ಅಂತ.

ಆದರೆ ಈ ಪ್ರಕರಣ ಮಾತ್ರವಲ್ಲ, ಹಿಂದಿನ ಹಲವು ಭಯೋತ್ಪಾದನೆ ಸಂಬಂಧಿತ ಪ್ರಕರಣಗಳಲ್ಲಿ ಮುಸ್ಲಿಂ ಆರೋಪಿಗಳು ದೀರ್ಘಕಾಲ ಸೆರೆಯಲ್ಲಿದ್ದ ನಂತರ ಖುಲಾಸೆಗೊಂಡಿದ್ದಾರೆ. ಇಂತಹ ಪ್ರಕರಣಗಳು ನ್ಯಾಯ ವ್ಯವಸ್ಥೆಯಲ್ಲಿ ಇರುವ ಪಕ್ಷಪಾತ ಮತ್ತು ತನಿಖಾ ಲೋಪಗಳನ್ನು ಬಯಲು ಮಾಡುತ್ತವೆ.

ಭಾರತದಲ್ಲಿ ಕಳೆದ ಎರಡು ದಶಕಗಳಲ್ಲಿ ಹಲವು ಭಯೋತ್ಪಾದನೆ ಪ್ರಕರಣಗಳಲ್ಲಿ ಮುಸ್ಲಿಂ ವ್ಯಕ್ತಿಗಳನ್ನು ಬಂಧಿಸಿ, ಹಿಂಸೆಗೆ ಒಳಪಡಿಸಿ, ನಂತರ ಸಾಕ್ಷ್ಯಗಳ ಕೊರತೆಯಿಂದ ಖುಲಾಸೆಗೊಳಿಸಲಾಗಿದೆ.

ಮುಂಬೈ ರೈಲು ಸ್ಫೋಟಗಳು (2006): 2006ರ ಜುಲೈ 11ರಂದು ಮುಂಬೈನ ಉಪನಗರ ರೈಲುಗಳಲ್ಲಿ ನಡೆದ ಏಳು ಸ್ಫೋಟಗಳಲ್ಲಿ 189 ಜನರು ಸಾವನ್ನಪ್ಪಿದ್ದರು ಮತ್ತು 800ಕ್ಕೂ ಹೆಚ್ಚು ಗಾಯಗೊಂಡಿದ್ದರು. 13 ಮುಸ್ಲಿಂ ವ್ಯಕ್ತಿಗಳನ್ನು ಬಂಧಿಸಿ, ಅವರನ್ನು ಸಿಮಿ ಮತ್ತು ಲಷ್ಕರ್-ಎ-ತೈಬಾ ಸದಸ್ಯರೆಂದು ಆರೋಪಿಸಲಾಯಿತು. ಅವರು ಸುಮಾರು 19 ವರ್ಷಗಳ ಕಾಲ ಸೆರೆಯಲ್ಲಿದ್ದರು (ಒಬ್ಬರು ಕಮಲ್ ಅನ್ಸಾರಿ 2021ರಲ್ಲಿ ಕೋವಿಡ್‌ನಿಂದ ಜೈಲಿನಲ್ಲೇ ಸಾವನ್ನಪ್ಪಿದರು). 2025ರ ಜುಲೈ 21ರಂದು ಬಾಂಬೆ ಹೈಕೋರ್ಟ್ 12 ಜನರನ್ನು ಖುಲಾಸೆಗೊಳಿಸಿತು.

ಮುಂಬೈ ರೈಲು ಸ್ಫೋಟಗಳು 2006

ಮಲೇಗಾಂವ್ ಸ್ಫೋಟಗಳು (2006): 2006ರ ಸೆಪ್ಟೆಂಬರ್ 8ರಂದು ಮಹಾರಾಷ್ಟ್ರದ ಮಲೇಗಾಂವ್‌ನಲ್ಲಿ ನಡೆದ ಸ್ಫೋಟಗಳಲ್ಲಿ 40 ಜನರು ಸಾವನ್ನಪ್ಪಿದ್ದರು. ಒಂಬತ್ತು ಮುಸ್ಲಿಂ ವ್ಯಕ್ತಿಗಳನ್ನು ಬಂಧಿಸಿ, ಸಿಮಿ ಸದಸ್ಯರೆಂದು ಆರೋಪಿಸಲಾಯಿತು. ಅವರು 10 ವರ್ಷಗಳ ಕಾಲ ಸೆರೆಯಲ್ಲಿದ್ದರು. 2016ರಲ್ಲಿ ಸೆಷನ್ಸ್ ಕೋರ್ಟ್ ಅವರನ್ನು ಸಾಕ್ಷ್ಯಗಳ ಕೊರತೆಯನ್ನು ಉಲ್ಲೇಖಿಸಿ ನಿರ್ದೋಶಿಗಳು ಅಂತ ಬಿಡುಗಡೆ ಮಾಡಿತು.

ಮಾಲೆಗಾಂವ್ ಸ್ಫೋಟಗಳು 2


ಮಕ್ಕಾ ಮಸೀದಿ ಸ್ಫೋಟ (2007, ಹೈದರಾಬಾದ್): 2007ರ ಮೇ 18ರಂದು ಹೈದರಾಬಾದ್‌ನ ಮಕ್ಕಾ ಮಸೀದಿಯಲ್ಲಿ ನಡೆದ ಸ್ಫೋಟದಲ್ಲಿ 14 ಜನರು ಸಾವನ್ನಪ್ಪಿದ್ದರು. ನಾಲ್ವರು ಮುಸ್ಲಿಂ ವ್ಯಕ್ತಿಗಳಾದ ಶೋಯಬ್ ಜಗಿರ್ದಾರ್, ಅಬ್ದುಲ್ ನಯೀಮ್, ಎಂಡಿ ಇಮ್ರಾನ್ ಖಾನ್ ಮತ್ತು ಸೈಯದ್ ಇಮ್ರಾನ್ ಅವರನ್ನು ಬಂಧಿಸಿ, ಹುಜಿಗೆ ಸಂಬಂಧಿಸಿದಂತೆ ಆರೋಪಿಸಲಾಯಿತು. ಅವರು 7 ವರ್ಷಗಳ ಕಾಲ ಸೆರೆಯಲ್ಲಿದ್ದರು. 2014ರಲ್ಲಿ ಸೆಷನ್ಸ್ ಕೋರ್ಟ್ ಅವರನ್ನು ಖುಲಾಸೆಗೊಳಿಸಿತು, ಆರೋಪಗಳನ್ನು ಬೆಂಬಲಿಸುವ ಸಾಕ್ಷ್ಯಗಳಿಲ್ಲ ಎಂದು ಹೇಳಿತು.

ಮಕ್ಕಾ ಮಸೀದಿ ಸ್ಫೋಟ 2007 ಹೈದರಾಬಾದ್ 1

ಇರ್ಷಾದ್ ಅಲಿ ಮತ್ತು ಮೌರಿಫ್ ಕಮರ್ ಪ್ರಕರಣ (2005): 2005ರಲ್ಲಿ ಇಬ್ಬರು ಮುಸ್ಲಿಂ ವ್ಯಕ್ತಿಗಳಾದ ಇರ್ಷಾದ್ ಅಲಿ ಮತ್ತು ಮೌರಿಫ್ ಕಮರ್ ಅವರನ್ನು ಅಲ್-ಬದ್ರ್ ಬ್ರಿಗೇಡ್ ಸದಸ್ಯರೆಂದು ಬಂಧಿಸಲಾಯಿತು. ಅವರು ಮಾಜಿ ಇಂಟೆಲಿಜೆನ್ಸ್ ಬ್ಯೂರೋ ಮಾಹಿತಿದಾರರು. ಅವರು 11 ವರ್ಷಗಳ ಕಾಲ ಸೆರೆಯಲ್ಲಿದ್ದರು. 2017ರಲ್ಲಿ ದೆಹಲಿ ಟ್ರಯಲ್ ಕೋರ್ಟ್ ಅವರನ್ನು ಖುಲಾಸೆಗೊಳಿಸಿತು, ಅವರನ್ನು ತಪ್ಪಾಗಿ ಫ್ರೇಮ್ ಮಾಡಲಾಗಿತ್ತು ಎಂದು ಹೇಳಿತು. ಪೊಲೀಸ್ ತನಿಖೆಯಲ್ಲಿ ಲೋಪಗಳಿದ್ದವು.

ನಿಸಾರುದ್ದೀನ್ ಅಹ್ಮದ್ ಪ್ರಕರಣ (1994): 1994ರಲ್ಲಿ 19 ವರ್ಷದ ನಿಸಾರುದ್ದೀನ್ ಅಹ್ಮದ್ ಅವರನ್ನು ಬಾಬ್ರಿ ಮಸೀದಿ ಧ್ವಂಸದ ಮೊದಲ ವಾರ್ಷಿಕೋತ್ಸವದಂದು ಐದು ರೈಲು ಸ್ಫೋಟಗಳಲ್ಲಿ ಭಾಗಿಯಾಗಿದ್ದರು ಎಂದು ಬಂಧಿಸಲಾಯಿತು. ಅವರು 23 ವರ್ಷಗಳ ಕಾಲ ಸೆರೆಯಲ್ಲಿದ್ದರು. 2016ರಲ್ಲಿ ನ್ಯಾಯಾಲಯವು ಅವರನ್ನು ಖುಲಾಸೆಗೊಳಿಸಿತು, ಆರೋಪಗಳನ್ನು ಬೆಂಬಲಿಸುವ ಸಾಕ್ಷ್ಯಗಳಿಲ್ಲ ಎಂದು ಹೇಳಿತು.

ಹುಬ್ಬಳ್ಳಿ ಸಿಮಿ ಪ್ರಕರಣ (2008): 2008ರಲ್ಲಿ 17 ಮುಸ್ಲಿಂ ವ್ಯಕ್ತಿಗಳನ್ನು ಸಿಮಿ ಅಂದರೆ ಸ್ಟೂಡೆಂಟ್ಸ್ ಇಸ್ಲಾಮಿಕ್ ಮೂವ್‌ಮೆಂಟ್ ಆಫ್ ಇಂಡಿಯಾದ ಸದಸ್ಯರೆಂದು ಬಂಧಿಸಿ, ದೇಶದ ವಿರುದ್ಧ ಯುದ್ಧ ಮತ್ತು ಸ್ಫೋಟಕಗಳನ್ನ ಹೊಂದಿದ್ದಾರೆ ಎಂದು ಆರೋಪಿಸಲಾಯಿತು. ಅವರು 7 ವರ್ಷಗಳ ಕಾಲ ಸೆರೆಯಲ್ಲಿದ್ದರು. 2015ರಲ್ಲಿ ಹುಬ್ಬಳ್ಳಿ ಸೆಷನ್ಸ್ ಕೋರ್ಟ್



ಅವರನ್ನು ಖುಲಾಸೆಗೊಳಿಸಿತು, ಆರೋಪಗಳನ್ನು ಬೆಂಬಲಿಸುವ ಸಾಕ್ಷ್ಯಗಳಿಲ್ಲ ಎಂದು ಹೇಳಿತು.

ಹೈದರಾಬಾದ್ ಕಾನ್ಸ್ಪಿರಸಿ ಪ್ರಕರಣ (2010): 2010ರಲ್ಲಿ ರಿಯಾಜ್ ಖಾನ್ ಮತ್ತು ಅಬ್ದುಲ್ ಸಯೀದ್ ಅವರನ್ನು ಮಕ್ಕಾ ಮಸೀದಿ ಸ್ಫೋಟಕ್ಕೆ ಪ್ರತೀಕಾರವಾಗಿ ಪೊಲೀಸರನ್ನು ಕೊಲ್ಲುವ ಸಂಚು ರೂಪಿಸಿದ್ದರು ಎಂದು ಬಂಧಿಸಲಾಯಿತು. ಅವರು 7 ವರ್ಷಗಳ ಕಾಲ ಸೆರೆಯಲ್ಲಿದ್ದರು. 2017ರಲ್ಲಿ ಅಡಿಷನಲ್ ಮೆಟ್ರೋಪಾಲಿಟನ್ ಸೆಷನ್ಸ್ ಜಡ್ಜ್ ಅವರನ್ನು ಖುಲಾಸೆಗೊಳಿಸಿದರು. ಸಾಕ್ಷ್ಯಗಳಿಲ್ಲ ಎಂದು ಹೇಳಿತು. ಪ್ರಕರಣದಲ್ಲಿ ಐದು ಶಂಕಿತರು ಸಾವನ್ನಪ್ಪಿದ್ದರು.

ಸೂರತ್ ಸಿಮಿ ಪ್ರಕರಣ (2001): 2001ರಲ್ಲಿ ಗುಜರಾತ್‌ನಲ್ಲಿ ಮುಸ್ಲಿಂ ಶಿಕ್ಷಣದ ಕುರಿತು ಸೆಮಿನಾರ್‌ನಲ್ಲಿ ಭಾಗವಹಿಸಿದ್ದ 127 ಮುಸ್ಲಿಂ ವ್ಯಕ್ತಿಗಳನ್ನು ಸಿಮಿ ಸದಸ್ಯರೆಂದು ಯುಎಪಿಎ ಅಡಿ ಬಂಧಿಸಲಾಯಿತು. ಅವರು ವಿವಿಧ ಅವಧಿಗಳ ಕಾಲ ಸೆರೆಯಲ್ಲಿದ್ದರು (ಉದಾ: ಮೊಹಮ್ಮದ್ ಅಬ್ದುಲ್ ಹೈ 14 ತಿಂಗಳು). ಐದು ಜನರು ವಿಚಾರಣೆ ಸಂದರ್ಭದಲ್ಲಿ ಸಾವನ್ನಪ್ಪಿದ್ದರು. 2021ರ ಮಾರ್ಚ್ 6ರಂದು ಸೂರತ್ ನ್ಯಾಯಾಲಯವು ಅವರನ್ನು ಖುಲಾಸೆಗೊಳಿಸಿತು, ಪ್ರಾಸಿಕ್ಯೂಷನ್ ಸಾಕ್ಷ್ಯಗಳನ್ನು ಒದಗಿಸಲು ವಿಫಲವಾಯಿತು ಎಂದು ಹೇಳಿತು.

ಮೊಹಮ್ಮದ್ ಇಲ್ಯಾಸ್ ಪ್ರಕರಣ (1996): 1996ರ ಏಪ್ರಿಲ್ 27ರಂದು ಉತ್ತರ ಪ್ರದೇಶದ ಗಾಜಿಯಾಬಾದ್‌ನಲ್ಲಿ ಬಸ್ ಸ್ಫೋಟದಲ್ಲಿ 10 ಜನರು ಸಾವನ್ನಪ್ಪಿದ್ದರು. ಮೊಹಮ್ಮದ್ ಇಲ್ಯಾಸ್ ಅವರನ್ನು ಹರ್ಕತ್-ಉಲ್-ಅನ್ಸಾರ್ ಸಂಬಂಧಿಸಿದಂತೆ ಆರೋಪಿಸಲಾಯಿತು. ಅವರು 28 ವರ್ಷಗಳ ಕಾಲ ಸೆರೆಯಲ್ಲಿದ್ದರು. 2025ರ ನವೆಂಬರ್ 10ರಂದು ಅಲಹಾಬಾದ್ ಹೈಕೋರ್ಟ್ ಅವರನ್ನು ಖುಲಾಸೆಗೊಳಿಸಿತು.

ಆದರೆ ಇಲ್ಲಿ ಪ್ರಶ್ನೆ ಬರೋದು, ನಿರಪರಾಧಿಯನ್ನು ಬಂಧಿಸಿದವರು ಯಾರಿಗೆ ಉತ್ತರ ಕೊಡಬೇಕು? ಕಳೆದುಹೋದ 6, 10, 15 ವರ್ಷಗಳಿಗೆ ಪರಿಹಾರ ಯಾರು ಕೊಡುತ್ತಾರೆ?

2014ರಲ್ಲಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ನಂತರ, ಕಾನೂನಿನ ಬಳಕೆ ಶೇ. 50ಕ್ಕಿಂತ ಹೆಚ್ಚು ಏರಿಕೆಯಾಗಿದೆ. 2019ರ ವರದಿ ಪ್ರಕಾರ, ಕಳೆದ 10 ವರ್ಷಗಳಲ್ಲಿ ನಡೆದ ಶೇ 91ರಷ್ಟು ದ್ವೇಷ ಅಪರಾಧಗಳು ಮೋದಿ ಸರ್ಕಾರದ ಕಾಲದಲ್ಲೇ ನಡೆದಿವೆ. ರಾಷ್ಟ್ರೀಯ ತನಿಖಾ ಏಜೆನ್ಸಿ () ಹಾಗೂ ರಾಜ್ಯಗಳ ವಿಭಾಗಗಳು ಸಾವಿರಾರು ಮುಸ್ಲಿಮರನ್ನು ಬಂಧಿಸಿವೆ. ಅವರಲ್ಲಿ ಬಹುತೇಕರು ನಂತರ ಖುಲಾಸೆಯಾಗಿದ್ದಾರೆ. ಬಂಧಿಸಿದ ನಂತರ ಅವರನ್ನು ವಿಚಾರಣೆಯ ಹೆಸರಿನಲ್ಲಿ ಕಿರುಕುಳ ನೀಡುವುದು ಇನ್ನೂ ಭಯಾನಕ.

ಒಬ್ಬ ಯುವಕ 20ನೇ ವಯಸ್ಸಿನಲ್ಲಿ ಬಂಧಿತನಾದರೆ, 30 ಅಥವಾ 35ಕ್ಕೆ ಹೊರಬರುವಾಗ ಆತನ 15 ವರ್ಷ ಕಳೆದು ಹೋಗಿರುತ್ತದೆ. ಉದ್ಯೋಗ ಇಲ್ಲ, ಸಮಾಜದಲ್ಲಿ ಆರೋಪಿ ಎಂಬ ಮುದ್ರೆ, ಕುಟುಂಬ ಮಾನಸಿಕವಾಗಿ ಚೂರಾಗಿರುತ್ತದೆ, ನ್ಯಾಯಾಲಯ ಖುಲಾಸೆ ಮಾಡಿದರೂ, ಸಮಾಜ ಮನ್ನಣೆ ನೀಡುವುದಿಲ್ಲ. ಭಯೋತ್ಪಾದನೆ ವಿರುದ್ಧ ಹೋರಾಟದ ಹೆಸರಿನಲ್ಲಿ, ನಿರ್ದಿಷ್ಟ ಸಮುದಾಯದ ಮೇಲೆ ಅನುಮಾನ ಪಡುವುದು, ಇನ್ನೆಷ್ಟು ಕಾಲ ಮುಂದುವರಿಯುತ್ತದೆ? ನ್ಯಾಯ ವ್ಯವಸ್ಥೆ ಒಂದು ಶಿಕ್ಷಾ ಯಂತ್ರವಾಗಬಾರದು. ಅದು ರಕ್ಷಣೆ ನೀಡುವ ವ್ಯವಸ್ಥೆಯಾಗಬೇಕು. ಒಬ್ಬ ನಿರಪರಾಧಿ ದಶಕ ಜೈಲಿನಲ್ಲಿ ಕಳೆಯುವುದೇ, ದೇಶದ ಭದ್ರತೆನಾ? ನ್ಯಾಯ ತಡವಾದರೆ ಅದು ನ್ಯಾಯವೇ? ಅಕ್ಷರಧಾಮ ಪ್ರಕರಣದ ಖುಲಾಸೆ ಒಂದು ಸಂತೋಷದ ಸುದ್ದಿ ಹೌದು. ಆದರೆ ಕಳೆದುಹೋದ ಬದುಕನ್ನ ಯಾರು ಮರಳಿ ಕೊಡುತ್ತಾರೆ?

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR